# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 55 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–09–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 55 | Title- Code: KARKAN 28269 | Chitradurga | Date: 04-09-2023 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಂಕಷ್ಟದಲ್ಲಿರುವ ಮಕ್ಕಳ ನೆರವಿಗೆ 1098 ಸಹಾಯವಾಣಿ: ಸಚಿವ ನಾರಾಯಣಸ್ವಾಮಿ 2

ಲಸಿಕೆ ವಂಚಿತ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿ: ಡಾ. ಅಶ್ವಥ್ 3

ಒತ್ತಡದ ಜೀವನದಲ್ಲಿ ಹೃದಯದ ಮೇಲೆ ಅತಿಯಾದ ಪ್ರಭಾವ 4


## ಫಾಸ್ಟ್ ನ್ಯೂಸ್

### ದಂಡ ಸಹಿತ ಸಂಘ ಸಂಸ್ಥೆಗಳ ಲೆಕ್ಕಪತ್ರ ದಾಖಲೆ ಸಲ್ಲಿಗೆ ಅವಕಾಶ

» **ಚಿತ್ರದುರ್ಗ**

1960ರ ಕರ್ನಾಟಕ ಸಂಘಗಳ ನೊಂದಣಿ ಅಧಿನಿಯಮದಕಲಂ13ರಪ್ರಕಾರನೊಂದಣಿಯಾದ ಎಲ್ಲಾ ಸಂಘ ಸಂಸ್ಥೆಗಳು ವಾರ್ಷಿಕವಾಗಿ ಆಸ್ತಿ–ಜವಾಬ್ದಾರಿ ತಃಖ್ತೆ ಕಾರ್ಯಕಾರಿ ಸಮಿತಿ ಸದಸ್ಯರ ವಿವರಗಳು ಹಾಗೂ ಲೆಕ್ಕಪತ್ರಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಆದರೆ ಹಲವು ಸಂಘ ಸಂಸ್ಥೆಗಳು 5 ವರ್ಷಗಳಿಂದ ಲೆಕ್ಕಪತ್ರಗಳನ್ನು ಸಲ್ಲಿಸಿರುವುದಿಲ್ಲ. ಸಂಘ ಸಂಸ್ಥೆಗಳ ಹಿತಾಸಕ್ತಿ ಹಿನ್ನಲೆಯಲ್ಲಿ ಸಹಕಾರಿ ಸಂಘಗಳ ಪ್ರಾಧಿಕಾರ ಪ್ರತಿ ವರ್ಷಕ್ಕೆ ರೂ.3000 ದಂಢ ವಿಧಿಸಿ 2024 ಜೂನ್ 30ರ ವರೆಗೆ ಲೆಕ್ಕಪತ್ರಗಳನ್ನು ಸಲ್ಲಿಸಲು ಅವಕಾಶ ನೀಡಿದೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ಚಿತ್ರದುರ್ಗ ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಗಳೂರು ಶಾಖಾ ಗ್ರಂಥಾಲಯ ಉದ್ಘಾಟನೆ

» **ದಾವಣಗೆರೆ**

ಸೆಪ್ಟೆಂಬರ್ 5 ರ ಶಿಕ್ಷಕರ ದಿನಾಚರಣೆ ದಿನದಂದು ಬೆಳಿಗ್ಗೆ 10 ಗಂಟೆಗೆ ಜಗಳೂರಿನ ಹಳೆಯ ಪಟ್ಟಣ ಪಂಚಾಯಿತಿ ಆವರಣದಲ್ಲಿರುವ ಶಾಖಾ ಗ್ರಂಥಾಲಯ ಉದ್ಘಾಟನೆಯನ್ನು ಜಗಳೂರು ಶಾಸಕರಾದ ದೇವೇಂದ್ರಪ್ಪ ನೆರವೇರಿಸುವರು. ಇವರೊಂದಿಗೆ ಪಟ್ಟಣ ಪಂಚಾಯಿತಿಯ ಆಡಳಿತಾಧಿಕಾರಿಗಳು, ಸರ್ವ ಸದಸ್ಯರು, ತಹಶೀಲ್ದಾರ್, ಮುಖ್ಯಾಧಿಕಾರಿಗಳು ಮತ್ತು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿರ್ದೇಶಕರಾದ ಸತೀಶ ಕುಮಾರ ಹೊಸಮನಿ, ನಿಕಟಪೂರ್ವ ಉಪಸಭಾಪತಿಗಳ ಅಪ್ತ ಕಾರ್ಯದರ್ಶಿ ತಿಪ್ಪೇಸ್ವಾಮಿ ಹಾಗೂ ಊರಿನ ಗಣ್ಯ ವ್ಯಕ್ತಿಗಳು ಮುಖಂಡರು ಮತ್ತು ಸಾಹಿತಿಗಳಾ ಎನ್.ಟಿ ಎರ್ರಿಸ್ವಾಮಿ ಭಾಗವಹಿಸಲಿದ್ದಾರೆ.

### ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅರ್ಜಿ ಆಹ್ವಾನ

» **ದಾವಣಗೆರೆ**

ಹರಿಹರ ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ 2023–24ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ (ಓಊಒ) ವಿವಿಧ ಕಾರ್ಯಕ್ರಮಗಳ ಸೌಲಭ್ಯ ಪಡೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕ ಅಧಿಕಾರಿಗಳನ್ನು ಸಂಪರ್ಕಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಹರಿಹರ ಕಚೇರಿ ತಿಳಿಸಿದ್ದಾರೆ.

### ಯುವಜನೋತ್ಸವ-2023ರ ಪ್ರಯುಕ್ತ ಮ್ಯಾರಾಥಾನ್

» **ದಾವಣಗೆರೆ**

ಸೆಪ್ಟೆಂಬರ್ 4 ರಂದು ಬೆಳಿಗ್ಗೆ 9 ಗಂಟೆಗೆ ದಾವಣಗೆರೆ ನಗರದ ಸಿ.ಜಿ. ಆಸ್ಪತ್ರೆ ಮುಂಭಾಗ ಇಲ್ಲಿ ಯುವಜನೋತ್ಸವ–2023ರ ಪ್ರಯುಕ್ತ ಮ್ಯಾರಥಾನ್ ಸ್ಪರ್ಧೆ ಏರ್ಪಡಿಸಲಾಗಿದೆ.ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಕೋಶ ಘಟಕ, ರಕ್ತ ಭಂಡಾರ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಶಾಲಾ ಶಿಕ್ಷಣ ಇಲಾಖೆ, ಯುವಜನ ಮತ್ತು ಕ್ರೀಡಾ ಇಲಾಖೆ, ಎನ್.ಎಸ್.ಎಸ್. ಮತ್ತು ಜಿಲ್ಲೆಯ ವಿವಿಧ ರಕ್ತ ಕೇಂದ್ರಗಳು, ಜಿಲ್ಲಾ ಆರ್.ಆ ರ್.ಸಿ ಕಾಲೇಜುಗಳು ಹಾಗೂ ವಿವಿಧ ಸ್ವಯಂ ಸೇವಾಸಂಘ ಸಂಸ್ಥೆಗಳು ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ ಬಿ ಇಟ್ನಾಳ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ, ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರಾದ ಡಾ.ನಾಗೇಂದ್ರಪ್ಪ.ಎಂ.ಬಿ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯ ಅಧೀಕ್ಷಕರಾದ ಡಾ.ಮಧು.ಎಸ್.ಪಿ, ಚಿಗಟೇರಿ ಜಿಲ್ಲಾ ಆಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ.ಎಸ್.ಕೆ ನಾಗವೇಣಿ, ಡಾ.ಪಿ.ಡಿ.ಮುರಳೀಧರ ಪಾಲ್ಗೊಳುವರು.

### ದುರ್ಗದಲ್ಲಿ ಎದ್ದು ಕಾಣತ್ತಿದೆ ಸ್ವಚ್ಚತೆ ಕೊರತೆ

# ತಿಪ್ಪೇಗುಂಡಿ ಆಯ್ತು ಡಿವೈಡರ್ ಗ್ಯಾಪ್

» **ವಿಶೇಷ ವರದಿ**

**ನಮ್ಮಜನ ವಿಶೇಷ**

ಚಿತ್ರದುರ್ಗ: ಕಸದ ಬುಟ್ಟಿ , ನಗರಸಭೆ ವಾಹನಗಳಿಗೆ ಹಸಿಕಸ ಒಣಕಸ ಹಾಕುವುದು ಜನರು ಮಾಡುತ್ತಾರೆ. ಆದರೆ ವ್ಯಾಪರಸ್ಥರ ಸ್ಥಳವಾಗಿರುವ ಗಾಂಧಿ ಸರ್ಕಲ್ ಬಳಿ ಡಿವೈಡರ್ ಮಧ್ಯದ ಜಾಗ ತಿಪ್ಪೇಗುಂಡಿ ಆದರು ಹೇಳೋರಿಲ್ಲ ಕೇಳೋರಿಲ್ಲ.

ಚಿತ್ರದುರ್ಗ ನಗರದ ಹೃದಯ ಭಾಗ ಎನಿಸಿಕೊಂಡಿರುವ ಗಾಂಧಿ ವೃತ್ತದ ಬಳಿಯಿಂದ ಕೆಎಸ್ಆರ್‌ಟಿಸಿ ಕಡೆ ತೆರಳುವ ಒನ್ ವೇ ರಸ್ತೆಯಲ್ಲಿನ ಡಿವೈಡರ್ ಮಧ್ಯದ ಜಾಗವನ್ನು ಕಸದ ತೊಟ್ಟಿಯಾಗಿ ಪರಿವರ್ತನೆ ಮಾಡಿಕೊಂಡ ವ್ಯಾಪರಿಗಳು ಮತ್ತು ಬಾರ್ ಶಾಪ್ ಮಾಲೀಕರಿಗೆ ನಗರಸಭೆ ಮಾತ್ರ ಕಣ್ಮುಚ್ಚಿ ಕುಳಿತಿದೆ. ಅಂಗಡಿ ಮಾಲೀಕರಿಗೆ ಕಂದಾಯ ವಸೂಲಿ ಮಾಡುವುದು ಗೊತ್ತಿದೆ. ಆದರೆ ಅವರಿಗೆ ಯಾವ ನಿರ್ದೇಶನ ನೀಡಬೇಕು. ಯಾವ ರೀತಿ ಅಂಗಡಿ ಮುಗ್ಗಟ್ಟಿನ ಮಾಲೀಕರಿಗೆ ವ್ಯಾಪರದ ನಂತರ ಕಸ ವಿಲೇವಾರಿ ಎಲ್ಲಿ ಮಾಡಬೇಕು ಎಂಬುದನ್ನು ಮಾತ್ರ ತಿಳಿಸಿಲ್ಲ ಅನಿಸುತ್ತದೆ.

ಗಾಂಧಿ ಸರ್ಕಲ್ ನಲ್ಲಿ ವ್ಯಾಪರ ಮಾಡುವ ಹಣ್ಣು, ತರಕಾರಿ, ಹೂ ಮಾರಟಗಾರರು, ಹೋಟೇಲ್ , ಬಾರ್ ಶಾಪ್ ನ ಕಸವನ್ನು ಡಿವೈಡರ್ ಮಧ್ಯದಲ್ಲಿ ಸುರಿಯುವ ಮೂಲಕ ಹೊಸ ಕಸದ ತೊಟ್ಟಿ ಸೃಷ್ಟಿಸಿಕೊಂಡಿದ್ದಾರೆ.





ಡಿವೈಡರ್ ಮಧ್ಯದಲ್ಲಿ ಕೊಳೆತ ಹಣ್ಣು ತರಕಾರಿ, ಕೊಳೆತ ಹೂಗಳು, ಬೀರ್ ಬಾಟಲಿಗಳು, ವಿಸ್ಕಿ ಬಾಟಲಿಗಳು, ಟೀ ಶಾಪ್ ನವರು ಬಳಸಿದ ಲೋಟಗಳನ್ನು ಸಹ ಡಿವೈಡರ್ ಮಧ್ಯದಲ್ಲಿ ಹಾಕಿದ್ದಾರೆ. ಇನ್ನೇನು ಹದಿನೈದು ಇಪ್ಪತ್ತು ದಿನ ಬಿಟ್ಟರೆ ಸಾಕು ಡಿವೈಟರ್ ತುಂಬಿಸಿ ನೂರಾರು ಕಾಯಿಲೆಗಳನ್ನು ಹರಡಿಸುವ ಅಟ್ ಸ್ಪಾಟ್ ಆಗಿ ಪರಿವರ್ತನೆ ಆಗುತ್ತದೆ. ಆದ್ದರಿಂದ



ಕೂಡಲೇ ನಗರಸಭೆ ಅಧಿಕಾರಿಗಳು ಖಡಕ್ ಸೂಚನೆ ಮೂಲಕ ಇಂತಹ ಪ್ರಕರಣಗಳು ಆಗದಂತೆ ತಡೆಯಲು ಸೂಕ್ತ ಕ್ರಮಗಳು ಜರುಗಿಸಿದರೇ ಮಾತ್ರ ಇಂತಹ ಪ್ರಕರಣಗಳು ತಡೆಯಬೇಕು ಎಂಬ ಮಾತು ಸಾರ್ವಜನಿಕರಿಂದ ಕೇಳಿ ಬರುತ್ತಿದ್ದು ಅಧಿಕಾರಿಗಳು ಯಾವ ರೀತಿ ಸ್ವಚ್ಚತೆಗೆ ಆದ್ಯತೆ ನೀಡುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

### ವ್ಯಾಪಾರಸ್ಥರಿಗೆ ಅಗತ್ಯವಿದೆ ಖಡಕ್ ವಾರ್ನಿಂಗ್

ನಗರಸಭೆ ಅಧಿಕಾರಿಗಳು, ಪರಿಸರ ಅಧಿಕಾರಿಗಳು , ಆರೋಗ್ಯ ಅಧಿಕಾರಿಗಳು ನಗರದಲ್ಲಿ ಕೆಲಸ ಮಾಡುತ್ತಿದ್ದಾರಾ ಎಂಬ ಪ್ರಶ್ನೆ ಮೂಡಿದೆ. ಏಕೆಂದರೆ ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ ಸಹ ಎಲ್ಲಿ ಬೇಕೋ ಅಲ್ಲಿ ವ್ಯಾಪರಿಗಳ ಇಷ್ಟದಂತೆ ಕಸ ಹಾಕಿದರು ಸಹ ಕಾನೂನು ಕ್ರಮ ಜರುಗಿಸಿಲ್ಲ. ಗಾಂಧಿ ವೃತ್ತದಲ್ಲಿನ ನೂರಾರು ವ್ಯಾಪರಿಗಳು ವ್ಯಾಪರಿಗಳು ಡಿವೈಡರ್ ಮಧ್ಯೆ ಮತ್ತು ಹೊಸ ಮಾರುಕಟ್ಟೆಗೆ ತೆಗೆದಿರುವ ಖಾಲಿ ಜಾಗದ ಗುಂಡಿಯನ್ನು ಕಸದ ತೊಟ್ಟಿಯಾಗಿಸಿಕೊಂಡಿದ್ದು ಇನ್ನಾದರು ಇಂತಹ ಪ್ರಕರಣಗಳಿಗೆ ತಡೆ ಹಾಕುವ ಅವಶ್ಯಕತೆ ಇದೆ.

### ಆರೋಗ್ಯಕ್ಕೆ ಕುತ್ತು

ನಗರದಲ್ಲಿ ಸ್ವಚ್ಚತೆ ಕಾಪಡದಿದ್ದರೆ ರೋಗಗಳು ಹರಡುವುದು ಹೆಚ್ಚಾಗುತ್ತದೆ. ಸಾರ್ವಜನಿಕರ ಸ್ಥಳಗಳಲ್ಲಿ ಹೆಚ್ಚು ಕಾಯಿಲೆಗಳು ಹರಡುವ ಲಕ್ಷಣ ಹೆಚ್ಚಿದೆ. ಕೊಳೆತ ವಸ್ತುಗಳಿಂದ ಕೂತ ನೊಣಗಳು, ಇತರೆ ಸೂಕ್ಷ್ಮಣುಗಳಿಂದ ಅಕ್ಕ ಪಕ್ಕದ ಹೊಟೇಲ್ ಆಹಾರಗಳ ಮೇಲೆ ಪರಿಣಾಮ ಬೀರುವುದರಿಂದ ಜನರ ಆರೋಗ್ಯಕ್ಕೆ ಕುತ್ತು ಬರುವ ಸಾಧ್ಯತೆ ಹೆಚ್ಚಿದೆ.

## ಸರಳ ಹಾಗೂ ಅರ್ಥಪೂರ್ಣ ಶ್ರೀಕೃಷ್ಣ ಜಯಂತಿ ಆಚರಣೆ: ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

■ **ಜನಾಶಯಪ್ರಭ ಚಿತ್ರದುರ್ಗ**

ಸೆ.6 ರಂದು ಬೆಳಿಗ್ಗೆ 10:30ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸರಳ ಹಾಗೂ ಅರ್ಥಪೂರ್ಣವಾಗಿ ಶ್ರೀಕೃಷ್ಣ ಜಯಂತಿ ಆಚರಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಈ ಕುರಿತು ಶನಿವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದಾಗ ಜಯಂತಿ ಆಚರಣೆಗಳಿಗೆ ಮೆರುಗು ಬರುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಯಾದವ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ಸಮುದಾಯದಲ್ಲಿ ಹಲವರು ಶೈಕ್ಷಣಿವಾಗಿ ಉತ್ತಮ ಸಾಧನೆ ತೋರಿದ್ದಾರೆ. ರಾಜಕೀಯ ಸೇರಿದಂತೆ ಹಲವು ಕ್ಷೇತ್ರದಲ್ಲಿ ಸಮುದಾಯದ ಜನರು ಮುನ್ನಲೆಗೆ ಬರುತ್ತಿದ್ದಾರೆ. ಸಮುದಾಯದ



ಅಸ್ಮಿತೆ ಎನಿಸಿದ ಶ್ರೀಕೃಷ್ಣನ ಜಯಂತಿಯನ್ನು ಎಲ್ಲರೂ ಒಟ್ಟುಗೂಡಿ ಆಚರಿಸಬೇಕು. ಜಯಂತಿ ಅಂಗವಾಗಿ ಶ್ರೀಕೃಷ್ಣನ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಲಾಗುವುದು. ಗೀತಗಾಯನ, ಉಪನ್ಯಾಸ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು.

ಸಭೆಯಲ್ಲಿಉಪವಿಭಾಗಾಧಿಕಾರಿಎಂ.ಕಾರ್ತಿಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಪೊಲೀಸ್ ನಿರೀಕ್ಷಕ ಗುಡ್ಡಪ್ಪ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ಅಲೆಮಾರಿ ಮತ್ತ ಅರೆ ಅಲೆಮಾರಿ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎಸ್.ಲಕ್ಷ್ಮೀಕಾಂತ, ಜಿಲ್ಲಾ ಯಾದವ ಸಂಘದ ಕಾರ್ಯದರ್ಶಿ ಬಿ.ಆನಂದ, ಜಿಲ್ಲಾ ಯಾದವ ನೌಕರರ ಸಂಘದ ಅಧ್ಯಕ್ಷ ಆರ್. ಕೃಷ್ಣಪ್ಪ, ಜಿಲ್ಲಾ ಗೊಲ್ಲರ ಸಂಘದ ನಿರ್ದೇಶಕ ಪಿ.ಬಿ.ಪ್ರಕಾಶ್ ಸೇರಿದಂತೆ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಆಯ್ಕೆ ವಿವರ

» **ದಾವಣಗೆರೆ**

ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ ನೀಡಲಾಗುವ 2023–24ನೇ ಸಾಲಿನ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ವಿಭಾಗದಿಂದ ಆಯ್ಕೆಯಾದ ಶಿಕ್ಷಕರಿಗೆ ಸೆ.05 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ನಡೆಯುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ನಿವೃತ್ತ ನೌಕರರಿಗೆ ಸನ್ಮಾನ ಮತ್ತು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಹಮ್ಮಿಕೊಳ್ಳಲಾಗಿದ್ದು, ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ವಿವರ ಈ ಕೆಳಕಂಡಂತಿದೆ. ಪ್ರಾಥಮಿಕ ಶಾಲಾ ವಿಭಾಗದಿಂದ ಆಯ್ಕೆಯಾದ ಶಿಕ್ಷಕರ ಹೆಸರು ಮತ್ತು ವಿಳಾಸ: ಚನ್ನಗಿರಿ ತಾಲ್ಲೂಕಿನ ಸತೀಶ್, ಸಹ ಶಿಕ್ಷಕರು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ತಿಮ್ಲಾಪುರ, ರತ್ನಮ್ಮ ಸಹ ಶಿಕ್ಷಕಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬೆಟ್ಟಕಡೂರು, ಹರಿಹರ ತಾಲ್ಲೂಕಿನ ಅರುಣ್ ಬಿ, ಸಹ ಶಿಕ್ಷಕರು ಸರ್ಕಾರಿ ಪ್ರಾಥಮಿಕ ಕಿರಿಯ ಪ್ರಾಥಮಿಕ ಶಾಲೆ ಹಿಂಡಸಘಟ್ಟ, ಕೆ.ವಿ ಸುಜಾತ ಮುಖ್ಯ ಶಿಕ್ಷಕರು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಬುಳ್ಳಾಪುರ, ದಾವಣಗೆರೆ ಉತ್ತರ ವಲಯದ ತಿಪ್ಪೇಶ್ ಟಿ.ಬಿ ಸಹ ಶಿಕ್ಷಕರು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಬಿ.ಚಿತ್ತಾನಹಳ್ಳಿ.

ಪುಟ ↘ 2

**ಪ್ರಮುಖ ಸುದ್ದಿ**

# ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆಗೆ ಧ್ವಜ ಪೂಜೆ

» **ಚಿತ್ರದುರ್ಗ**

ಕೋಟೆ ನಾಡು ಚಿತ್ರದರ್ಗ ನಗರದಲ್ಲಿ ವಿಶ್ವ ಹಿಂದೂ ಪರಿಷತ್ ಭಜರಂಗದಳ ನೇತೃತ್ವದಲ್ಲಿ ನಡೆಯುವ 2023ರ ಹಿಂದೂ ಮಹಾಗಣಪತಿಯ ಮಹೋತ್ಸವದ ಪ್ರಯುಕ್ತವಾಗಿ ಇಂದು ಬಿ.ಡಿ.ರಸ್ತೆಯಲ್ಲಿರುವ ಜೈನ ಧಾಮದಲ್ಲಿ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆಗೆ ಗೋ ಪೂಜೆ ಹಾಗೂ ಧ್ವಜ ಪೂಜೆ ಮೂಲಕ ಓಂಕಾರ ಹಾಕಲಾಯಿತು.

ಬೆಳಗ್ಗೆ 8.30ರಿಂದ ಆರಂಭವಾದ ಪೂಜಾ ಕರ್ರ್ಯಕ್ರಮಗಳು ಆರಂಭವಾಗಿ, 9.30ಕ್ಕೆ ಸಮಾಪನಗೊಂಡವು. ಇಂದಿನಿಂದ ಪೆಂಡಾಲ್ ಅಳವಡಿಸುವ ಕೆಲಸಗಳು ಸೇರಿದಂತೆ ಎಲ್ಲ ಕರ್ರ್ಯಗಳು ಅಧಿಕೃತವಾಗಿ ಚಾಲನೆ ನೀಡಿದಂತಾಗಿದೆ.

**ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಹಿನ್ನೆಲೆ:** ಚಿತ್ರದರ್ಗದಲ್ಲಿ ಹಿಂದೂ ಮಹಾಗಣಪತಿ ಉತ್ಸವ 2006ರಿಂದ ಪ್ರಾರಂಭವಾಯಿತು. ಆರ್‌ಎಸ್‌ಎಸ್‌ನ ಎರಡನೇ ಸರಸಂಘಚಾಲಕರಾದ ಶ್ರೀ ಗುರೂಜಿ ಜನ್ಮಶತಾಬ್ದ ರ್ಷದಂದು ವಿಶ್ವಹಿಂದೂ ಪರಿಷತ್, ಭಜರಂಗ ದಳದವರು ಗಣೇಶೋತ್ಸವ ಆಚರಣೆಗೆ ತರ್ಾನಿಸಿದರು. ನಗರದ ಅಯ್ಯಣ್ಣನ ಪೇಟೆಯಲ್ಲಿದ್ದ ಆರೆಸ್ಸೆಸ್ ಕಚೇರಿ ಶಕ್ತಿನಿಕೇತನದಲ್ಲಿ ಪಂಚಮುಖಿ





ಗಣಪನನ್ನು ಪ್ರತಿಷ್ಠಾಪಿಸಿದರು. ಆನಂತರ ಇದು ತ್ಯಾಗರಾಜ ಬೀದಿಯ ಪೇಟೆ ಆಂಜನೇಯ ಸ್ವಾಮಿ ದೇವಸ್ಥಾನ, ಡಿಎಚ್‌ಓ ಕಚೇರಿ ಮುಂಭಾಗ, ಬಳಿಕ ಸ್ಟೇಡಿಯಂ ರಸ್ತೆಯ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣ ಕ್ಕೆ ಶಿಫ್ಟ್ ಆಯಿತು. ಈಗ ಅಂತಿಮವಾಗಿ ಬಿ.ಡಿ.ರಸ್ತೆಯ ಜೈನಧಾಮದಲ್ಲಿ ಪ್ರತಿಷ್ಠಾಪಿಸಿದ ಮಾಡಲಾಗುತ್ತಿದೆ.

**ವಿಶಿಷ್ಟ ಗಣಪನ ಮರ್ತಿಗಳು:** ಪಂಚಮುಖಿ ವಿಗ್ರಹ, ಹನುಮಂತನ ಹೆಗಲ ಮೇಲಿರುವ ಗಣಪ, ಪ್ರಸಕ್ತ ರ್ಷ ಶಿವನ ರೂಪದಲ್ಲಿರುವ ವಿಗ್ರಹ ಹೀಗೆ ಪ್ರತಿ ರ್ಷ ವಿಶಿಷ್ಟ ಗಣಪತಿ ವಿಗ್ರಹಗಳನ್ನು ಪ್ರತಿಷ್ಠಾಪಿಸಲಾಗುತ್ತಿದೆ. ಹಿಂದೂ ಮಹಾಗಣಪನ ಶೋಭಾಯಾತ್ರೆ ಸಾಮಾಜಿಕ ಸಾಮರಸ್ಯಕ್ಕೆ ಎಡೆ ಮಾಡಿಕೊಟ್ಟಿದೆ. ಲಕ್ಷಾಂತರ ಜನ ಭಾಗವಹಿಸುವ ಮೂಲಕ ದೇಶದಲ್ಲಿ ಅತೀ ಹೆಚ್ಚು ಜನ ಸೇರುವ ಎರಡನೇ ಗಣೇಶೋತ್ಸವ ಎಂದೂ ಹೆಸರಾಗಿದೆ. ಎಲ್ಲ ಜಾತಿ, ರ್ಮಗಳ ಜನರು ಭಾಗವಹಿಸುವುದು ವಿಶೇಷ. ಯಾದವ ಮಠದ ಕೃಷ್ಣ ಯಾದವಾನಂದ ಸ್ವಾಮೀಜಿ, ಮಾದಾರ ಚನ್ನಯ್ಯ ಗುರುಪೀಠದ ಮಾದಾರ ಚನ್ನಯ್ಯ ಸ್ವಾಮೀಜಿ, ಕುಂಚಿಟಿಗ ಮಠದ ಶಾಂತವೀರ ಸ್ವಾಮೀಜಿ, ಹಿಂದೂ ಮಹಾಗಣಪತಿ ಉತ್ಸವ ಸಮಿತಿ ಅಧ್ಯಕ್ಷ ಜಿ.ಎಂ.ಸುರೇಶ್, ಎಂಎಲ್ಸಿ ಕೆ.ಎಸ್.ನವೀನ್, ಟಿ.ಬದರೀನಾಥ್, ಮತ್ತಿತರರಿದ್ದರು.

## ಫಾಸ್ಟ್ ನ್ಯೂಸ್

### ದವನಂ ಟೆಕ್ಸ್‌ಟೈಲ್ಸ್ ಸರಗಳ್ಳತನ ಪ್ರಕರಣ ಮೂವರು ಆರೋಪಿಗಳ ಬಂಧನ

» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ದವನಂ ಟೆಕ್ಸ್‌ಟೈಲ್ ಮಾಲೀಕ ಗೋವಿಂದರಾಜಗುಪ್ತರವರ ಕೊರಳಲ್ಲಿದ್ದ 45 ಗ್ರಾಂ ತೂಕದ 7 ಲಕ್ಷ ಮೌಲ್ಯದ ಚಿನ್ನದ ಸರವನ್ನು ಆಗಸ್ಟ್ 27ರ ಬೆಳಗ್ಗೆ 10ರ ಸಮಯದಲ್ಲಿ ಮೂವರು ಕಳ್ಳರು ಸರವನ್ನು ಕಿತ್ತು ಮೋಟಾರ್ ಬೈಕ್‌ನಲ್ಲಿ ಪರಾರಿಯಾಗಿದ್ದರು. ಹಾಡುಹಗಲೇ ನಡೆದ ಈ ಸರಗಳ್ಳತನ ಸಾರ್ವಜನಿಕರಲ್ಲಿ ಕೂತುಹಲದ







ಜೊತೆಯಲ್ಲಿ ಭಯವನ್ನು ಸಹ ಉಂಟು ಮಾಡಿತ್ತು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಆರೋಪಿಗಳ ಪತ್ತೆಗಾಗಿ ವಿವಿಧ ಆಯಾಮಗಳಲ್ಲಿ ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ,ಹೆಚ್ಚುವರಿರಕ್ಷಣಾಧಿಕಾರಿ ಕುಮಾರಸ್ವಾಮಿ, ಉಪ ವಿಭಾಗದ ಡಿವೈಎಸ್ಪಿ ರಾಜಣ್ಣ ಮಾರ್ಗದರ್ಶನದಲ್ಲಿ ಠಾಣಾ ಇನ್ಸ್‌ಪೆಕ್ಟರ್ ರಾಜ ಫಕೃದ್ದೀನ್ ದೇಸಾಯಿ ನೇತೃತ್ವದಲ್ಲಿ ತಂಡ ರಚಿಸಿ, ಪೊಲೀಸರ ಕ್ಷಿಪ್ರ ಕಾರ್ಯಚರಣೆಯಿಂದ ಮಾಲೀನ ಸಹಿತ ಕಳ್ಳರು ಪೊಲೀಸರ ಕೈಗೆ ಸಿಕ್ಕಿ ಬಿದಿದ್ದಾರೆ. ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದ ಜಯಕುಮಾರ್(24), ತಿಪಟೂರಿನ ಸಂಜಯ್ ಯಾನೆ ಸುಜಿತ್(19), ತಿಪಟೂರಿನ ಸುಮಂತ್(19) ಇವರನ್ನುಬಂಧಿಸಿ ವಿಚಾರಣೆ ನಡೆಸಿ ಕಳ್ಳತನ ಮಾಡಿದ್ದ ಬಂಗಾರದ ಸರ ಹಾಗೂ ಕೃತ್ಯಕ್ಕೆ ಉಪಯೋಗಿಸಿದ ಒಂದು ರಾಯಲ್ ಎನ್‌ಫೀಲ್ಡ್ ಬೈಕ್, ಹೊಂಡಾ ಯೂನಿಕಾರ್ನ್ ಬೈಕ್ ವಶಪಡಿಸಿಕೊಂಡಿದ್ದಾರೆ. ಜಿಲ್ಲಾ ರಕ್ಷಣಾಧಿಕಾರಿಗಳು ಕ್ಷಿಪ್ರಗತಿಯಲ್ಲ ಪ್ರಕರಣ ಬೇದಿಸಿದ ಪಿಎಸ್‌ಐ ಶಿವರಾಜ್, ಸಿಬ್ಬಂದಿಯಾದ ಹಾಲೇಶ್, ಸತೀಶ್, ಶ್ರೀಧರ, ರಮೇಶ್‌ಬಾರ್ಕಿ, ಶಿವರಾಜ್ ಇವರನ್ನು ಅಭಿನಂದಿಸಿದ್ದಾರೆ.

### 2ನೇ ಸುತ್ತಿನ ಮಿಷನ್ ಇಂದ್ರಧನುಷ್ 5.0 ಸಭೆ

» ದಾವಣಗೆರೆ

ಜಿಲ್ಲೆಯಾದ್ಯಂತ ಸೆಪ್ಟೆಂಬರ್ 11 ರಿಂದ 16 ರವರೆಗೆ ನಡೆಯುವ 2 ನೇ ಸುತ್ತಿನ ಡಿ.ಟಿ.ಎಫ್ ಮಿಷನ್ ಇಂದ್ರಧನುಷ್ 5.0 (ಐ.ಎಂ.ಐ) ಸಭೆಯನ್ನು ಸೆ. 5 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಷಣ್ಮುಖಪ್ಪ ತಿಳಿಸಿದ್ದಾರೆ.

### ಶಿಕ್ಷಕರ ದಿನಾಚರಣೆ ಮತ್ತು ದಿನಾಚರಣೆ ಅಂಗವಾಗಿ ಶಿಕ್ಷಕರ ಸನ್ಮಾನ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಸೆಪ್ಟೆಂಬರ್ 5 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಅಂಗವಾಗಿ ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ ದಾವಣಗೆರೆ ಉತ್ತರ ಮತ್ತು ದಕ್ಷಿಣ ವಲಯದ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಿ ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಡಾ.ಜಿ.ಎಂ. ಸಿದ್ದೇಶ್ವರ ಇವರು ಭಾವಚಿತ್ರಗಳ ಅನಾವರಣಗೊಳಿಸುವರು. ವಿಧಾನಸಭಾ ಸದಸ್ಯರಾದ ಡಾ. ಶಾಮನೂರು ಶಿವಶಂಕರಪ್ಪನವರು ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿಗೌಡ, ಎಸ್.ಎಲ್ ಭೋಜೇಗೌಡ, ವೈ.ಎ. ನಾರಾಯಣಸ್ವಾಮಿ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ಉಪಮೇಯರ್ ಯಶೋಧ ಯಗ್ಗಪ್ಪ, ಸದಸ್ಯೆ ಗೀತಾ ದಿಳ್ಯಪ್ಪ, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವೀರೇಶ್ ಎಸ್.ಒಡೇನ್‌ಪುರ, ದಾವಣಗೆರೆ ತಾಲ್ಲೂಕು ತಹಶೀಲ್ದಾರ್ ಡಾ. ಅಶ್ವತ್ ಎಂ.ಬಿ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ರಾಮಭೋವಿ ಉಪಸ್ಥಿತರಿರುವರು.

# ಸಂಕಷ್ಟದಲ್ಲಿರುವ ಮಕ್ಕಳ ನೆರವಿಗೆ 1098 ಸಹಾಯವಾಣಿ: ಸಚಿವ ನಾರಾಯಣಸ್ವಾಮಿ

» ಚಿತ್ರದುರ್ಗ

ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಸಚಿವಾಲಯ ಮಿಷನ್ ವಾತ್ಸಲ್ಯ ಯೋಜನೆಯಡಿ, ಮಕ್ಕಳ ಸಹಾಯವಾಣಿ ಕೇಂದ್ರಗಳನ್ನು ನೇರವಾಗಿ ಕೇಂದ್ರ ಸರ್ಕಾರದಿಂದಲೇ ನಿರ್ವಹಣೆ ಮಾಡಲಿದೆ. ಇದರ ಅಂಗವಾಗಿ ಪ್ರತಿ ಜಿಲ್ಲಾ ಹಂತದಲ್ಲಿಯೂ ಮಕ್ಕಳ ಸಹಾಯವಾಣಿ ಕೇಂದ್ರವನ್ನು ತರೆಯಲಾಗಿದೆ. ಸಂಕಷ್ಟದಲ್ಲಿರುವ ಮಕ್ಕಳಿಗೆ 1098 ಸಹಾಯವಾಣಿ ಮೂಲಕ ಅಗತ್ಯ ನೆರವು ನೀಡಲಾಗುವುದು ಎಂದು ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ನಗರದ ಬಾಲಭವನದ ಆವರಣದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರಿನ ಮಕ್ಕಳ ರಕ್ಷಣಾ ನಿರ್ದೇಶನಾಲಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಸಹಾಯವಾಣಿ ಕೇಂದ್ರ-1098 ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದ ಎಲ್ಲಾ ವರ್ಗದ ಜನರ ಸಮಸ್ಯೆಗಳ ಪರಿಹಾರಕ್ಕಾಗಿ 112 ಸಹಾಯವಾಣಿ ಕಾರ್ಯನಿರ್ವಹಿಸುತ್ತಿದೆ. ಇದೇ ಮಾದರಿಯಲ್ಲಿ ಹಲವು ಇಲಾಖೆಗಳು ಸಾರ್ವಜನಿಕರ ಅನುಕೂಲಕ್ಕಾಗಿ ಸಹಾಯವಾಣಿಗಳನ್ನು ಆರಂಭಿಸಿವೆ. ರಾಷ್ಟ್ರದ್ಯಂತ ಸಂಕಷ್ಟದಲ್ಲಿ ಸಿಲುಕಿರುವ ಮಕ್ಕಳ ರಕ್ಷಣೆ, ಪೋಷಣೆ



ಮತ್ತು ತುರ್ತು ಸೇವೆಗಳನ್ನು ಒದಗಿಸಲು 1098 ಸಹಾಯವಾಣಿ ಆರಂಭಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ಸಾಕಷ್ಟು ಕಾರ್ಯಕ್ರಮಗಳನ್ನು ರೂಪಿಸಿವೆ. ಈ ಕಾರ್ಯಕ್ರಮಗಳ ಬಗ್ಗೆ ಅಧಿಕಾರಿಗಳು ತಿಳಿದುಕೊಂಡು, ಮಕ್ಕಳಿಗೆ ತಲುಪಿಸುವ ಕಾರ್ಯಮಾಡಬೇಕು. ಇದರಿಂದಾಗಿ ಅನ್ಯಾಯ ಹಾಗೂ ದೌರ್ಜನ್ಯಕ್ಕೆ ಒಳಗಾದ ಮಕ್ಕಳಿಗೆ ಸಹಾಯಕ ದೊರಕಿದಂತೆ ಆಗುತ್ತದೆ ಎಂದರು.

ಬಹುತೇಕ ಸಂದರ್ಭದಲ್ಲಿ ಕುಟುಂಬದ ಸದಸ್ಯರು, ಆಪ್ತರು ಹಾಗೂ ಪರಿಚಿತರಿಂದಲೇ ಮಕ್ಕಳ ಮೇಲೆ ದೌರ್ಜನ್ಯ ಆಗುವ ಸಂಭವವಿದೆ. ಇದು ಅತ್ಯಂತ ಗಾಬರಿಗೊಳಿಸುವ ವಿಷಯವಾಗಿದೆ. ಪ್ರತಿಷ್ಠಿತ ವಿದ್ಯಾಸಂಸ್ಥೆಗಳಲ್ಲೂ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಅಂಶಗಳು ಬೆಳಕಿಗೆ ಬಂದಾಗ ಆತಂಕ ಹಾಗೂ ನೋವು ಉಂಟಾಗುತ್ತದೆ. ಮಕ್ಕಳಿಗೆ ರಕ್ಷಣಾ ಕವಚದಂತೆ ಇರಬೇಕಾದ ಶಾಲಾ ಕಾಲೇಜುಗಳಲ್ಲಿಯೇ ಈ ರೀತಿ ಘಟನೆಗಳು ನೆಡಯವುದು ವಿಷಾದನೀಯ ಎನಿಸುತ್ತದೆ. ಮಕ್ಕಳಿಗೆ ಅವಶ್ಯ ಇರುವ ಜ್ಞಾನಾರ್ಜನೆ ಹಾಗೂ ಬುದುಕಿಗೆ ದಾರಿ ದೀಪವಾಗಬೇಕಾದ ಶಿಕ್ಷಣ ಸಂಸ್ಥೆಗಳ ವಾತಾವರಣ ಹಾಳಾಗುತ್ತಿರುವುದು ಬೇಸರ ತರಿಸುತ್ತದೆ. ದೊಡ್ಡ ದೊಡ್ಡ ಮಹಾನಗರಗಳಲ್ಲಿ ಇಂತಹ ಘಟನೆಗಳು ಮೇಲಿಂದ ಮೇಲೆ ನಡೆಯುತ್ತಿವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಂತ್ರಿಗಳು, ಸಂಸದರು, ಶಾಸಕರು, ಎಲ್ಲಾ ಹಂತದ ಚುನಾಯಿತ ಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಒಗ್ಗೂಡಿ ಕಾರ್ಯನಿರ್ವಹಿಸಿದರೆ ಇಂತಹ ಘಟನೆಗಳು ಮರುಕಳಿಸದ ಹಾಗೇ ನೋಡಿಕೊಳ್ಳಬಹುದ ಎಂದರು.

ಮಕ್ಕಳ ರಕ್ಷಣಾ ಘಟಕದಿಂದ ಜಿಲ್ಲೆಯ ಎಲ್ಲಾ ಭಾಗಗಳಲ್ಲಿ ಪ್ರವಾಸ ನಡೆಸಿ ಮಕ್ಕಳು ಹಾಗೂ ಪೋಷಕರನ್ನು ಜಾಗೃತಗೊಳಿಸಬೇಕು. ಸಮಾಜ ಘಾತುಕ ಶಕ್ತಿಗಳಲ್ಲಿ ಭಯ ಹುಟ್ಟಿಸಬೇಕು. ಸರ್ಕಾರ ಇಂತಹ ವಿಚಾರಗಳನ್ನು ಗಂಭೀರವಾಗಿ ತೆಗೆದುಕೊಂಡು ಸಂಬಂದಪಟ್ಟವರ ಮೇಲೆ ಕಠಿಣ ಕ್ರಮಕೈಗೊಳ್ಳುವುದು ಎಂಬುದನ್ನು ತಪ್ಪಿತಸ್ಥರಿಗೆ ಮನವರಿಕೆಮಾಡಿಕೊಡಬೇಕು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇದರಲ್ಲಿ ಪ್ರಮುಖ ಪಾತ್ರ ಹೊಂದಿದ್ದು, ಈ ಕುರಿತು ಹೆಚ್ಚಿನ ರೀತಿಯ ಪ್ರಚಾರ ಮಡಬೇಕು.

ಮಕ್ಕಳ ರಕ್ಷಣಾ ವಿಚಾರವನ್ನು ಕಚೇರಿಗೆ ಮಾತ್ರ ಸೀಮಿತಗೊಳಿಸಿ, ನಾಲ್ಕು ಗೋಡಗಳ ಮಧ್ಯ ಕಾರ್ಯಕ್ರಮ ಮಾಡುವ ಬದಲು, ಸಾರ್ವಜನಿಕಸ್ಥಳಗಳಿಗೆತೆರಳಿ ಕಾರ್ಯಕ್ರಮ, ಸಂವಾದ, ಚರ್ಚೆಗಳನ್ನು ನಡೆಸಬೇಕು. ಮನೆ ಹಾಗೂ ಮಕ್ಕಳ ಮನಗಳಿಗೆ ಇಂತಹ ವಿಚಾರಗಳನ್ನು ತಲುಪಬೇಕು. ಕಾನೂನಿನ ಅಂಶಗಳನ್ನು ತಿಳಿಯಪಡಿಸಬೇಕು. ಜಾಗೃತಿ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆದಾಗ ಮಕ್ಕಳ ದೌರ್ಜನ್ಯಗಳನ್ನು ತಡೆಯಬಹುದು. ಮಕ್ಕಳ ಮೇಲಿನ ದೌರ್ಜನ್ಯವನ್ನು ಜನಪ್ರತನಿಧಿಗಳು, ಸಮಾಜ ಚಿಂತಕರು, ಹೋರಾಟಗಾರರು ಗಂಭೀರವಾಗಿ ಪರಿಗಣಿಸಿ ಸ್ಪಂದನೆ ತೋರಬೇಕು. ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಪ್ರಾಸ್ತವಿಕವಾಗಿ ಮಾತನಾಡಿ, 1098 ಮಕ್ಕಳ ಸಹಾಯವಾಣಿ ಪಾಲನೆ ಮತ್ತು ರಕ್ಷಣೆ ಅವಶ್ಯವಿರುವ ಭಿಕ್ಷಾಟನೆ, ಬಾಲಕಾರ್ಮಿಕ, ಕಾಣೆಯಾದ, ಮಾದಕ ವ್ಯಸನಿ, ಪರಿತ್ಯಕ್ತ, ಬಾಲ್ಯವಿವಾಹ, ಹಿಂಸೆ ಮತ್ತು ಲೈಂಗಿಕ ದೌರ್ಜನ್ಯಕ್ಕೆ ಒಳಗಾದ, ಶಿಕ್ಷಣದಿಂದ ವಂಚಿತರಾದ ಮಕ್ಕಳಿಗೆ ರಕ್ಷಣೆ ಅಗತ್ಯ ನೆರವು ನೀಡಲಿದೆ. ಮಕ್ಕಳ ರಕ್ಷಣೆ ವಿಚಾರವಾಗಿ ಸಾರ್ವಜನಿಕರು ಕರೆ ಮಾಡಿ ತಿಳಿಸಿದರೆ, ತಕ್ಷಣೆ ಸ್ಪಂದಿಸಿ ಮಕ್ಕಳಿಗೆ ಸೂಕ್ತ ನೆರವು ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಅವರು ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಹಾಗೂ ಜಾಗೃತಿ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಪ್ರಭಾಕರ.ಆರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ, ಜಿಲ್ಲಾ ನಿರೂಪಣಾಧಿಕಾರಿ ವಿಜಯಕುಮರ್, ಮಹಿಳಾ ಮತ್ತು ಮ್ಕಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಲೋಕೇಶ್ವರಪ್ಪ ಸೇರಿದಂತೆ ಮತ್ತಿರರು ಇದ್ದರು.

## ಪಂಪ್‌ಸೆಟ್‌ಗೆ ಸಮರ್ಪಕ ವಿದ್ಯುತ್ ಪೂರೈಸದ ಬೆಸ್ಕಾಂ ಎದುರು ರೈತ ಸಂಘ ಪ್ರತಿಭಟನೆ

» ಚಿತ್ರದುರ್ಗ

ರೈತರ ಪಂಪ್‌ಸೆಟ್ ಮೋಟಾರ್‌ಗಳಿಗೆ ಸಮರ್ಪಕ ವಿದ್ಯುತ್ ನೀಡದಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರುಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದಿಂದ ತಿಪ್ಪಜ್ಜಿ ಸರ್ಕಲ್‌ನಲ್ಲಿರುವ ಬೆಸ್ಕಾಂ ಎದುರು ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಬರಪೀಡಿತ ಪ್ರದೇಶ ಚಿತ್ರದುರ್ಗ ಜಿಲ್ಲೆಯಲ್ಲಿ ಈರುಳ್ಳಿ, ಮೆಕ್ಕೆಜೋಳ, ಹತ್ತಿ, ಹೂವು, ಹಣ್ಣು, ತರಕಾರಿ ಇನ್ನು ಮುಂತಾದ ಬೆಳೆಗಳು ಬಾಡುತ್ತಿದ್ದು, ರೈತ ಕಂಗಾಲಾಗಿದ್ದಾನೆ. ಇರುವ ಅಲ್ಪಸ್ವಲ್ಪ ಬೆಳೆಗಳಿಗೆ ನುಸಿರೋಗ ತಗುಲುವ ಲಕ್ಷಣಗಳಿವೆ. ಇಂತಹ ಕಷ್ಟದ ಸಂದರ್ಭದಲ್ಲಿ ಪಂಪ್‌ಸೆಟ್‌ಗಳನ್ನು ನಂಬಿಕೊಂಡಿರುವ ರೈತರು ಬೆಳೆಗಳನ್ನು ಉಳಿಸಿಕೊಳ್ಳಲು ಹರಸಾಹಸ ಪಡುವಂತಾಗಿದೆ. ಒಂದು ದಿನಕ್ಕೆ ಏಳು ಗಂಟೆಗಳ ಕಾಲ ಪಂಪ್‌ಸೆಟ್‌ಗಳಿಗೆ ಕೊಡಬೇಕಿದ್ದ ಕರೆಂಟನ್ನು ಎರಡುವರೆ ಗಂಟೆ ಹಗಲು ಹಾಗೂ ರಾತ್ರಿ ವೇಳೆ ಎರಡು ಗಂಟೆ




ಪೂರೈಸುತ್ತಿದ್ದಾರೆ. ಮೂರು ಗಂಟೆಗಳ ಕಾಲ ಲೋಡ್‌ಶೆಡ್ಡಿಂಗ್ ಮಾಡಲಾಗಿದೆ. ಸುಮಾರು ಹದಿನೈದು ದಿನಗಳಿಂದ ಕರೆಂಟ್ ನೀಡದೆ ಸತಾಯಿಸುತ್ತಿದ್ದು, ಪಂಪ್‌ಸೆಟ್ ಮೋಟಾರುಗಳು ಸುಟ್ಟು ಹೋಗಿವೆ. ಸಂಬಂಧಪಟ್ಟ ಬೆಸ್ಕಾಂನವರು ಪೂರ್ಣ ಪ್ರಮಾಣದಲ್ಲಿ ವಿದ್ಯುತ್ ನೀಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಕೆಲವು ರೈತರು ಅರೆಬೆತ್ತಲೆಯಾಗಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ರೈತ ಸಂಘದ ಜಿಲ್ಲಾಧ್ಯಕ್ಷ ಈ.ಎನ್.ಲಕ್ಷ್ಮಿಕಾಂತ್, ಉಪಾಧ್ಯಕ್ಷ ಜಿ.ಬಿ.ಪಾಪಣ್ಣ, ತಾಲ್ಲೂಕು ಅಧ್ಯಕ್ಷ ಶಿವಮೂರ್ತಿ, ಉಪಾಧ್ಯಕ್ಷ ಶ್ರೀಧರ್‌ರೆಡ್ಡಿ, ಘಟಕ ಅಧ್ಯಕ್ಷ ಅಂಜಿನಪ್ಪ, ರಾಜೇಂದ್ರರೆಡ್ಡಿ, ಎಸ್.ಕುಮಾರ್, ಸಿ.ಕುಮಾರ್, ಎನ್.ಬಾಬುರೆಡ್ಡಿ, ಗಿರೀಶ, ಧನಂಜಯರೆಡ್ಡಿ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕವಾಡಿಗರಹಟ್ಟಿ ಪ್ರಕರಣ ಸಿಬಿಐಗೆ ವಹಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಧರಣಿ



» ಚಿತ್ರದುರ್ಗ

ಕಲುಷಿತ ನೀರು ಸೇವಿಸಿ ಕವಾಡಿಗರಹಟ್ಟಿಯಲ್ಲಿ ಆರು ಮಂದಿ ಮೃತಪಟ್ಟಿರುವುದನ್ನು ಸಿ.ಬಿ.ಐ.ತನಿಖೆಗೆ ಒಳಪಡಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಒನಕೆ ಓಬವ್ವ ವೃತ್ತದಲ್ಲಿ ಶುಕ್ರವಾರ ಧರಣಿ ನಡೆಸಲಾಯಿತು.ಸಾವನ್ನಪ್ಪಿರುವ ಆರು ಮಂದಿ ದಲಿತ ಕುಟುಂಬಗಳಿಗೆ ತಲಾ ಐವತ್ತು ಲಕ್ಷ ರೂ.ಪರಿಹಾರ ನೀಡಬೇಕು. ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ಕೊಡಬೇಕು.ಕಲುಷಿತ ನೀರು ಕುಡಿದು ಅಸ್ವಸ್ಥಗೊಂಡು ಆಸ್ಪತ್ರೆ ಸೇರಿದ ಪ್ರತಿಯೊಬ್ಬರಿಗೂ ಐದು ಲಕ್ಷ ರೂ.ಪರಿಹಾರ ಕೊಡಬೇಕು.ಮೃತ ಕುಟುಂಬದ ಸದಸ್ಯರಿಗೆ ಸರ್ಕಾರದಿಂದ ತಲಾ ಮೂರು ಎಕರೆ ಜಮೀನು ನೀಡಬೇಕು.ದಲಿತ ಯುವಕ ಹಾಗೂ ಸವರ್ಣಿಯರ ಯುವತಿ ಅಂತರ್‌ಜಾತಿ ವಿವಾಹವಾಗಿದ್ದೆ ಈ ಘಟನೆಗೆ ಕಾರಣವಾಗಿದ್ದು, ಇಡಿ ಪ್ರಕರಣವನ್ನು ಮುಚ್ಚಿ ಹಾಕಲು ಕಾಲರಾ ಇರಬಹುದೆಂದು ಅಂದಾಜಿಸಲಾಗುತ್ತಿರುವುದರಿಂದ ಸಿ.ಬಿ.ಐ. ಅಥವಾ ಸಿ.ಓ.ಡಿ.ಗೆ ವಹಿಸುವಂತೆ ಧರಣಿನಿರತರು ಆಗ್ರಹಿಸಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್, ಆರ್.ಶಾಂತಕುಮಾರ್, ಡಿ.ಶಿವಣ್ಣ, ಮದನ್‌ಕುಮಾರ್, ಮಂಜುನಾಥ್, ಆನಂದ, ಕುಬೇಂದ್ರಪ್ಪ, ಕರಿಯಣ್ಣ, ಅಜ್ಜಯ್ಯ, ಹೊನ್ನೂರಪ್ಪ, ನಾಗರಾಜು, ಓ.ಮಾರುತಿ, ಮೂರ್ತಣ್ಣ, ಮಾರುತಿ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಸಮಾಜ ಕಲ್ಯಾಣ ಸಚಿವರ ಪ್ರವಾಸ ಕಾರ್ಯಕ್ರಮ

**ಚಿತ್ರದುರ್ಗ:** ರಾಜ್ಯ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಅವರು ಸೆ. 04 ರಂದು ಚಿತ್ರದುರ್ಗ ಜಿಲ್ಲೆಗೆ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ದಾವಣಗೆರೆಯಿಂದ ಹೊರಟು ಬೆ. 10.30 ಗಂಟೆಗೆ ಚಿತ್ರದುರ್ಗಕ್ಕೆ ಆಗಮಿಸುವರು, ಬಳಿಕ ಇಲ್ಲಿನ ತ.ರಾ.ಸು. ರಂಗಮಂದಿರದಲ್ಲಿ ಏರ್ಪಡಿಸಲಾಗಿರುವ ಅಂಬೇಡ್ಕರ್ ಉತ್ಸವ ಹಾಗೂ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳ ಶೈಕ್ಷಣಿಕ ಸಮಾವೇಶದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಸಚಿವರು ಅದೇ ದಿನ ಮಧ್ಯಾಹ್ನ 03 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಪೊಲೀಸ್ ಪಬ್ಲಿಕ್ ಶಾಲೆಯಲ್ಲಿ ವಿದ್ಯಾರ್ಥಿ ಮಂಡಳಿಗೆ ಚಾಲನೆ

» ದಾವಣಗೆರೆ

ಶಾಲೆಯಲ್ಲಿ ಪಠ್ಯ ಚುಟುವಟಿಕೆಗಳ ಜೊತೆಜೊತೆಗೆ ನಾಯಕತ್ವ ಗುಣಗಳಿಗೂ ಆದ್ಯತೆ ನೀಡಬೇಕಾದ್ದರಿಂದ ವಿದ್ಯಾರ್ಥಿ ಮಂಡಳಿಯ ಸಭೆಗಳು ಅತ್ಯಾವಶ್ಯಕವೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದರು.

ಕೊಂಡಜ್ಜಿಯ ಪೊಲೀಸ್ ಪಬ್ಲಿಕ್ ಶಾಲೆಯಲ್ಲಿ ಜರುಗಿದ ಶಾಲಾ ನೂತನ ಚುನಾಯಿತ ವಿದ್ಯಾರ್ಥಿ ಮಂಡಳಿಯ ಪದಗ್ರಹಣ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಚುನಾಯಿತ ನಾಯಕರಿಗೆ ಪದಗ್ರಹಣ ಮಾಡಿ ಅವರು ಮಾತನಾಡಿದರು. ವಿದ್ಯಾರ್ಥಿ ಪರಿಷತ್ತು ಮಕ್ಕಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಸ್ವಯಂ ಶಿಸ್ತಿನಿಂದ ಬೆಳೆಸಲು ಮತ್ತು ದೇಶದ ಭವಿಷ್ಯದ ಪ್ರಜೆಗಳನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ನಾಯಕತ್ವ ಗುಣಗಳು ಮತ್ತು 21 ನೇ ಶತಮಾನದ ಸಾಮರ್ಥ ರೂಪಿಸುತ್ತದೆ.

ನಗರ ಮತ್ತು ಗ್ರಾಮಾಂತರ ಪ್ರತಿಭೆಗಳಿಗೆ ಪೊಲೀಸ್ ಪಬ್ಲಿಕ್ ಶಾಲೆಯು ಉತ್ತಮ ಅವಕಾಶಗಳನ್ನು ನೀಡಿದ್ದು, ಕೇವಲ ಎರಡು ವರ್ಷಗಳಲ್ಲಿ ಶಾಲೆಯ ತ್ವರಿತ ಪ್ರಗತಿಯು




ಶ್ಲಾಘನೀಯ ಎಂದರು.

ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಉಪಾಧೀಕ್ಷಕರು ಪ್ರಕಾಶ್.ಪಿ.ಬಿ ಮಾತಾಡಿ



ಶಾಲಾ ಚುನಾವಣೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ತಮ್ಮ ಶಿಸ್ತು ಮತ್ತು ಜವಾಬ್ದಾರಿಯನ್ನು ಒಳಗೊಂಡು ಶಾಲೆಯಲ್ಲಿ ಉತ್ತಮ ನಾಯಕತ್ವ ಗುಣ ಪಡೆದುಕೊಂಡುಎಲ್ಲರಿಗೂ ಮಾದರಿಯಾಗಬೇಕು ಎಂದರು.

**ಪದಗ್ರಹಣ :** ಪೊಲೀಸ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಶಿಸ್ತುಬದ್ಧ ಪಥ ಸಂಚಲನದ ಮೂಲಕ ಅತಿಥಿಗಳಿಗೆ ಗೌರವ ಸಲ್ಲಿಸಿದರು ಹಾಗೂ ಶಾಲೆಯ ಪ್ರಾಂಶುಪಾಲರಾದ ಯತೀಶ್ ಹೆಚ್.ವಿ ಆಚಾರ್ ಚುನಾಯಿತ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಿ ಪದಗ್ರಹಣ ನೆರವೇರಿಸಿದರು.

ಜಿಲ್ಲಾ ಹೆಚ್ಚುವರಿ ವರಿಷ್ಠಾಧಿಕಾರಿ ರಾಮಗೊಂಡ ಬಸರಗಿ, ಪೊಲೀಸ್ ಪಬ್ಲಿಕ್ ಶಾಲೆಯ ಬೋಧಕ, ಬೋಧಕೇತರ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲಸಿಕೆ ವಂಚಿತ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿ: ಡಾ. ಅಶ್ವಥ್

» ದಾವಣಗೆರೆ

ನಗರದ ಆರೋಗ್ಯ ಕೇಂದ್ರಗಳಲ್ಲಿ 5 ವರ್ಷದ ಒಳಗಿನ ಲಸಿಕೆ ವಂಚಿತ ಮಕ್ಕಳನ್ನು ಗುರುತಿಸಿ ಲಸಿಕೆ ನೀಡುವ ಕಾರ್ಯವಾಗಬೇಕೆಂದು ತಾಲ್ಲೂಕು ತಹಶೀಲ್ದಾರ್ ಡಾ. ಅಶ್ವಥ್ ತಿಳಿಸಿದರು.ಶುಕ್ರವಾರ ದಾವಣಗೆರೆ ತಾಲ್ಲೂಕು ತಹಶಿಲ್ದಾರ್ ಕಛೇರಿ ಸಭಾಂಗಣದಲ್ಲಿ ಜರುಗಿದ ಇಂದ್ರ ಧನುಷ್ ಲಸಿಕಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಇಂದ್ರ ಧನುಷ್ ಅಭಿಯಾನವು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಕಾರ್ಯಕ್ರಮವಾಗಿದೆ. ನಗರ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆ ವಂಚಿತ ಮಕ್ಕಳನ್ನು ಗುರುತಿಸಿ ಕರೆತರುವಂತೆ ಅಂಗನವಾಡಿ ಮೇಲ್ವಿಚಾರಕರು ಹಾಗೂ ಪಾಲಿಕೆಯವರು ಹೆಚ್ಚಿನ ಜವಾಬ್ದಾರಿ ಕೈಗೊಳ್ಳಬೇಕು ಎಂದು ತಿಳಿಸಿದರು. ಅಂಗನವಾಡಿ ವ್ಯಾಪ್ತಿಯಲ್ಲಿನ ಮಕ್ಕಳನ್ನು ಆಶಾ ಕಾರ್ಯಕರ್ತೆಯರು ಸಮೂಹವಾಗಿ ಸಮೀಕ್ಷೆ ನಡೆಸಿ ಲಸಿಕೆ ವಂಚಿತ ಮಕ್ಕಳನ್ನು ಲಸಿಕಾ ಕೇಂದ್ರಗಳಿಗೆ ಕರೆತರುವಂತೆ ಸಂಬಂಧಿತ ಎಲ್ಲಾ ಅಧಿಕಾರಿಗಳು ಜವಾಬ್ದಾರಿವಹಿಸಕೊಳ್ಳಬೇಕೆಂದರು. ಆರ್.ಸಿ.ಹೆಚ್.ಅಧಿಕಾರಿ ಡಾ. ರೇಣುಕಾರಾಧ್ಯ ಮಾತನಾಡಿ ಇಂಧ್ರ ಧನುಷ್ ಲಸಿಕೆ ಕಾರ್ಯಕ್ರಮವು ಸೆ.11 ರಿಂದ 16 ರವರೆಗೆ ಲಸಿಕೆ ವಂಚಿತ 5 ವರ್ಷದ ಒಳಗಿನ ಮಕ್ಕಳಿಗೆ ಲಸಿಕೆಯನ್ನು ಹಾಕಿಸಬೇಕು ಎಂದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ ಪಿ ಪಟಗೆ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹೆಚ್.ಉಮಾಪತಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಆಯ್ಕೆ ವಿವರ

» ಮೊದಲ ಪುಟದಿಂದ

ಗಂಗಮ್ಮ ಸಹ ಶಿಕ್ಷಕಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎಲೇಬೇತೂರು, ದಾವಣಗೆರೆ ದಕ್ಷಿಣ ವಲಯದ ಬಸವರಾಜ ಈ. ಮುಖ್ಯ ಶಿಕ್ಷಕರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಿಕ್ಕತೊಗಲೇರಿ, ನಾಗವೇಣಿ ಎ.ಎಲ್ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಶ್ರೀರಾಮಬಡಾವಣೆ, ಜಗಳೂರು ತಾಲ್ಲೂಕಿನ ಪ್ರೇಮ ಡಿ ಸಹ ಶಿಕ್ಷಕಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಚಿಕ್ಕಮ್ಮನಹಟ್ಟಿ, ಶ್ರೀದೇವಿ ಸಹ ಶಿಕ್ಷಕರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭರಮಸಮುದ್ರ, ಹೊನ್ನಾಳಿ ತಾಲ್ಲೂಕಿನ ಮಹಮ್ಮದ್ ರಫೀ ಬಿ. ಸಹ ಶಿಕ್ಷಕರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ತಿಮ್ಮೇನಹಳ್ಳಿ, ಸುಧಾ ಹೆಚ್.ಹೆಚ್ ಸಹ ಶಿಕ್ಷಕಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸೊರಟೂರು. ಪ್ರೌಢಶಾಲಾ ವಿಭಾಗದಿಂದ ಆಯ್ಕೆಯಾದ ಶಿಕ್ಷಕರ ಹೆಸರು ಮತ್ತು ವಿಳಾಸ: ಚನ್ನಗಿರಿ ತಾಲ್ಲೂಕಿನ ಹೆಚ್.ಪಿ ಶಿವಲಿಂಗಪ್ಪ, ದೈಹಿಕ ಶಿಕ್ಷಕರು, ಸರ್ಕಾರಿ ಬಾಲಿಕಾ ಪ್ರೌಢಶಾಲೆ, ನಲ್ಲೂರು, ಹರಿಹರ ತಾಲ್ಲೂಕಿನ ಮಂಜುನಾಥ ಟಿ.ಡಿ, ಸಹ ಶಿಕ್ಷಕರು, ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರೌಢಶಾಲೆ ಶಾಲೆ, ಹರಳಹಳ್ಳಿ, ದಾವಣಗೆರೆ ಉತ್ತರವಲಯದ ನಾಗರಾಜ ಟಿ, ಸಹ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಆವರಗೆರೆ, ದಾವಣಗೆರೆ ದಕ್ಷಿಣವಲಯದ ಶ್ರೀಕಾಂತ ಕೆ ಸರ್ಕಾರಿ ಪ್ರೌಢಶಾಲೆ, ಹೆಚ್ ಬಸವಾಪುರ, ಜಗಳೂರು ತಾಲ್ಲೂಕಿನ ಸಿದ್ದಪ್ಪ ಹೆಚ್.ಎಸ್, ಸಹ ಶಿಕ್ಷಕ, ಸರ್ಕಾರಿ ಪ್ರೌಢಶಾಲೆ, ದೇವಿಕೆರೆ, ಹೊನ್ನಾಳಿ ತಾಲ್ಲೂಕಿನ ಮಹೇಂದ್ರನಾಥ್ ಕೆ.ಜಿ, ಸಹ ಶಿಕ್ಷಕರು ಮಾರಿಕಾಂಭ ಪ್ರೌಢಶಾಲೆ, ಉಜ್ಜನೀಪುರ. ವಿಶೇಷ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ವಿವರ: ದಾವಣಗೆರೆ ಉತ್ತರ ವಲಯದ ಆರ್ ಅನ್ನಪೂರ್ಣ, ಸರ್ಕಾರಿ ಹಿರಿಯ ಪ್ರೌಢಶಾಲೆ ಎಲೇಬೇತೂರು, ಹಾಲಪ್ಪ ಡಿ, ಸಹ ಶಿಕ್ಷಕ ಸಿ.ವಿ.ವಿ ಕನ್ನಡ ಹಿರಿಯ ಪ್ರೌಢಶಾಲೆ ಶಾಲೆ, ಕೆ.ಪಿ ರಸ್ತೆ, ದಾವಣಗೆರೆ, ಹೊನ್ನಾಳಿ ತಾಲ್ಲೂಕಿನ ಕುಮಾರನಾಯ್ಕ್ ಎಸ್, ಸಹ ಶಿಕ್ಷಕರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕಮ್ಮಾರಗಟ್ಟೆ, ನ್ಯಾಮತಿ ತಾಲ್ಲೂಕಿನ ವಿಜಯಲಕ್ಷ್ಮಿ ಬಿ, ಸಹ ಶಿಕ್ಷಕಿ ಸರ್ಕಾರಿ ಕಿರಿಯ ಪ್ರೌಢಶಾಲೆ ಸುರಹೊನ್ನೆ, ರವಿಕುಮಾರ ಹೆಚ್, ಮುಖ್ಯ ಶಿಕ್ಷಕ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಟಿ ಗೋಪಗೊಂಡನಹಳ್ಳಿ, ಬಸವರಾಜ ಕೆ.ವಿ, ಸಹ ಶಿಕ್ಷಕ, ಸರ್ಕಾರಿ ಪ್ರೌಢಶಾಲೆ, ಜೀನಹಳ್ಳಿ. ಆಯ್ಕೆಯಾದ ಶಿಕ್ಷಕರಿಗೆ ಸೆ.05 ರಂದು ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಾಲಾಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಿ. ಕೊಟ್ರೇಶ್ ತಿಳಿಸಿದ್ದಾರೆ

### ಹೊಸದುರ್ಗ: ಸೆ.4 ರಂದು ದಸರಾ ಕ್ರೀಡಾಕೂಟ

» ಹೊಸದುರ್ಗ

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಇದೇ ಸೆ.4 ರ ಸೋಮವಾರದಂದು ಜಿಲ್ಲಾಡಳಿತ, ತಾಲೂಕು ಆಡಳಿತ, ಜಿ.ಪಂ, ತಾ.ಪಂ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 2023–24 ನೇ ಸಾಲಿನ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಆಯೋಜನೆ ಮಾಡಲಾಗಿದೆ. ಈ ಕ್ರೀಡಾಕೂಟವನ್ನು ಶಾಸಕ ಬಿ.ಜಿ ಗೋವಿಂದಪ್ಪ ಉದ್ಘಾಟಿಸಲಿದ್ದಾರೆ. ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಘನ ಉಪಸ್ಥಿತಿವಹಿಸಲಿದ್ದಾರೆ. ಈ ವೇಳೆ ಇತರ ಜನಪ್ರತಿನಿಧಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಇರಲಿದ್ದಾರೆ. ದಸರಾ ಕ್ರೀಡಾಕೂಟದಲ್ಲಿ ನಡೆಯುವ ಆಟಗಳು ವಾಲಿಬಾಲ್, ಖೋ ಖೋ, ಕಬ್ಬಡ್ಡಿ, ಥ್ರೋಬಾಲ್, ಫುಟ್ಬಾಲ್, ರಿಲೇ, ಉದ್ದಜಿಗಿತ, ಎತ್ತರ ಜಿಗಿತ, ತ್ರಿವಿಧ ಜಿಗಿತ, ಗುಂಡು ಎಸೆತ, ಚಕ್ರ ಎಸೆತ ಮತ್ತು ಜಾವಲಿನ್ ಸ್ಪರ್ಧೆ ಇರಲಿದೆ.

### ವಿದ್ಯುಚ್ಛಕ್ತಿ ಹಾಗೂ ಬಿಎಸ್‌ಎನ್‌ಎಲ್ ಯೋಜನೆಗಳ ಪರಿಶೀಲನಾ ಸಭೆ

# ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಸ್ಥಾವರಗಳ ಮಂಜೂರಾತಿಗೆ ಸಹಕಾರ: ನಾರಾಯಣಸ್ವಾಮಿ

» ಚಿತ್ರದುರ್ಗ



ಚಿತ್ರದುರ್ಗ ಜಿಲ್ಲೆಯ ಜನರು ಹಾಗೂ ರೈತರ ಅಗತ್ಯಕ್ಕೆ ಅನುಗುಣವಾಗಿ ಬೇಕಿರುವ ಸಾಮರ್ಥ್ಯದ ವಿದ್ಯುತ್ ಸ್ಥಾವರಗಳ ಮಂಜೂರಾತಿಗೆ ಕೇಂದ್ರ ಸರ್ಕಾರದಿಂದ ಎಲ್ಲ ಅಗತ್ಯ ಸಹಕಾರ ನೀಡಲಾಗುವುದು, ಈ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಪ್ರಸ್ತಾವನೆ ಸಿದ್ಧಪಡಿಸಿ ಸಲ್ಲಿಸುವಂತೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಕೆಪಿಟಿಸಿಎಲ್ ಹಾಗೂ ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿದ್ಯುಚ್ಛಕ್ತಿ ಹಾಗೂ ಬಿಎಸ್‌ಎನ್‌ಎಲ್ ಯೋಜನೆಗಳ ಕುರಿತು ಶುಕ್ರವಾರ ಏರ್ಪಡಿಸಲಾದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಗೆ ಪ್ರಸ್ತುತ 270 ಮೆಗಾವ್ಯಾಟ್ ವಿದ್ಯುತ್ ಪೂರೈಕೆಯ ಅಗತ್ಯವಿದೆ, ಆದರೆ ಜಿಲ್ಲೆಯಲ್ಲಿ 180 ಮೆ.ವ್ಯಾ. ಮಾತ್ರ ಲಭ್ಯವಿದೆ, ಈ ಭಾಗದ ರೈತರಿಗೆ ದಿನಕ್ಕೆ 7 ರಿಂದ 8 ಗಂಟೆಗಳ ಕಾಲ ವಿದ್ಯುತ್ ಪೂರೈಸಲು 270 ಮೆ.ವ್ಯಾ. ವಿದ್ಯುತ್ ಅವಶ್ಯವಾಗಿ ಬೇಕಾಗಿದೆ.

ಈ ನಿಟ್ಟಿನಲ್ಲಿ ಸರ್ಕಾರವು ಮೊಳಕಾಲ್ಮೂರು ಹಾಗೂ ಹಿರಿಯೂರು ತಾಲ್ಲೂಕುಗಳಲ್ಲಿ ಮಂಜೂರಾತಿ ಕೊಟ್ಟಿದೆ, ಅಲ್ಲದೆ ಹೊಳಲ್ಕೆರೆ ತಾಲ್ಲೂಕಿನ ಭರಮಸಾಗರ ಸೇರಿದಂತೆ ವಿವಿಧೆಡೆ ಕೂಡ ವಿದ್ಯುತ್ ಘಟಕಗಳ ನಿರ್ಮಾಣದ ಅಗತ್ಯ ಕಾಮಗಾರಿಗಳು, 66 ಕೆ.ವಿ. ಸ್ಟೇಷನ್‌ಗಳು ಮಂಜೂರಾಗಬೇಕಿದೆ. ಈಗಾಗಲೆ ಇದಕ್ಕಾಗಿ ಡಿಪಿಆರ್ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಈ ಬಗ್ಗೆ ಕಡತಗಳು ಯಾವ ಹಂತದಲ್ಲಿವೆ, ಯಾರ ಬಳಿ ಬಾಕಿ ಇವೆ, ಪ್ರಸ್ತುತ ಸ್ಥಿತಿಗತಿಗಳೇನು ಎಂಬ ಬಗ್ಗೆ ಅಧಿಕಾರಿಗಳು ಒಂದು ವಾರದ ಒಳಗಾಗಿ ಸಂಪೂರ್ಣ ವರದಿಯನ್ನು ಸಲ್ಲಿಸಬೇಕು.

ಜಿಲ್ಲೆಯಲ್ಲಿ ಬರದ ಛಾಯೆ ಕಂಡುಬಂದಿದ್ದು, ರೈತರು ಬೋರ್‌ವೆಲ್‌ಗಳ ಮೇಲೆ ಹೆಚ್ಚು ಅವಲಂಬನೆ ಮಾಡುವ ಸಾಧ್ಯತೆಗಳಿರುತ್ತವೆ, ಹೀಗಾಗಿ ಅವರಿಗೆ ಸಮರ್ಪಕ ವಿದ್ಯುತ್ ಪೂರೈಸಬೇಕಾಗುತ್ತಿದೆ. ಈ ನಿಟ್ಟಿನಲ್ಲಿ ಪ್ರತಿ ತಾಲ್ಲೂಕಿನಲ್ಲಿ ಎಷ್ಟೆಷ್ಟು ವಿದ್ಯುತ್ ಬೇಕಾಗುತ್ತದೆ, ಆಗಬೇಕಿರುವ ಯೋಜನೆಗಳು, ವಿದ್ಯುತ್ ಸ್ಟೇಷನ್‌ಗಳ ನಿರ್ಮಾಣ ಮುಂತಾದವುಗಳ ಬಗ್ಗೆ ಸಮಗ್ರ ವರದಿಯನ್ನು ಕೊಡಲು ಸೂಚನೆ ನೀಡಿದ ಸಚಿವ ಎ. ನಾರಾಯಣಸ್ವಾಮಿ ಅವರು, ವರದಿ ಸಲ್ಲಿಸಿದ ಬಳಿಕ, ಮತ್ತೊಮ್ಮೆ ಸಭೆ ನಡೆಸಿ, ಪರಿಶೀಲನೆ ನಡೆಸಲಾಗುವುದು ಎಂದು ಸೂಚನೆ ನೀಡಿದರು.

ಕೆಪಿಟಿಸಿಎಲ್ ನಿಂದ ಕೆಲವು ಗ್ರಾಮಗಳಲ್ಲಿ ರೈತರ ಅನುಮತಿ ಇಲ್ಲದೆ ವಿದ್ಯುತ್ ಟವರ್ ಗಳನ್ನು ಹಾಕಲಾಗುತ್ತಿರುವ ಬಗ್ಗೆ ಹಾಗೂ ಪರಿಹಾರದ ಮೊತ್ತ ಕಡಿಮೆ ಇರುವ ಬಗ್ಗೆ ರೈತರಿಂದ ಅಹವಾಲುಗಳು ಬಂದಿವೆ, ಹೀಗಾಗಿ ವಿದ್ಯುತ್ ಟವರ್ ಗಳನ್ನು ಹಾಕುವ ಮಾರ್ಗಗಳು ಹಾಗೂ ಪರಿಹಾರದ ಮೊತ್ತದ ಬಗ್ಗೆ ಮತ್ತೊಮ್ಮೆ ಪರಿಶೀಲಿಸಿ, ಸರ್ವೆ ನಡೆಸಿ, ವರದಿ ಸಲ್ಲಿಸಲು ಸಚಿವರು ಸೂಚನೆ ನೀಡಿದರು.

ವಿದ್ಯುಚ್ಛಕ್ತಿ ಯೋಜನೆಗಳ ಬಗ್ಗೆ ಆಯಾ ಲೋಕಸಭಾ ಸದಸ್ಯರ ಅಧ್ಯಕ್ಷತೆಯಲ್ಲಿ ನಿಯಮಿತವಾಗಿ ಪ್ರಗತಿ ಪರಿಶೀಲನಾ ಸಭೆ ನಡೆಸುವಂತೆ ಕಳೆದ 2021 ರ ಸೆಪ್ಟಂಬರ್ ತಿಂಗಳಿನಲ್ಲಿಯೇ ಸೂಚನೆ ಬಂದಿದ್ದರೂ, ಕೆಪಿಟಿಸಿಎಲ್ ಮತ್ತು ಬೆಸ್ಕಾಂ ಅವರು ಇದುವರೆಗೂ ಒಮ್ಮೆಯೂ ಸಭೆ ನಡೆಸಿಲ್ಲ, ಜಿಲ್ಲಾಧಿಕಾರಿಗಳಿಗೂ ಕೂಡ ಮಾಹಿತಿ ನೀಡಿಲ್ಲ. ಕೆಪಿಟಿಸಿಎಲ್ ನಲ್ಲಿ ಏನೇನು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ, ಯಾವ ಯೋಜನೆಗಳು ಪ್ರಗತಿಯಲ್ಲಿವೆ, ಜಿಲ್ಲೆಗೆ ಆಗಬೇಕಿರುವ ಯೋಜನೆಗಳೇನು, ರೈತರ ಸಮಸ್ಯೆಗಳಿಗೆ ಪರಿಹಾರಗಳೇನು ಎಂಬುದರ ಬಗ್ಗೆ ಸಂಸ್ಥೆಯ ಇಂಜಿನಿಯರ್‌ಗಳು ಇದುವರೆಗೂ ಮಾಹಿತಿ ನೀಡಿಲ್ಲ. ಕೆಪಿಟಿಸಿಎಲ್ ಅನ್ನು ಖಾಸಗಿ ಸ್ವಂತ ಸಂಸ್ಥೆ ಎಂದು ಅಧಿಕಾರಿಗಳು ಭಾವಿಸಿದಂತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಕೆಪಿಟಿಸಿಎಲ್ ವತಿಯಿಂದ ಕಳೆದ 02 ವರ್ಷಗಳ ಅವಧಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ ಜಿಲ್ಲಾಧಿಕಾರಿಗಳು ತನಿಖೆ ನಡೆಸಿ, ಮುಂದಿನ ಸಭೆಯೊಳಗೆ ವಿಸ್ತೃತ ವರದಿ ಸಲ್ಲಿಸುವಂತೆ ಸಚಿವರು ತಿಳಿಸಿದರು.

ಜಿಲ್ಲೆಯ 43 ಟವರ್‌ಗಳಲ್ಲಿ ಶೀಘ್ರ ಬಿಎಸ್‌ಎನ್‌ಎಲ್ 4ಜಿ : ಜಿಲ್ಲೆಯ 43 ಟವರ್ ಗಳಲ್ಲಿ ಶೀಘ್ರ ಬಿಎಸ್‌ಎನ್‌ಎಲ್ 4ಜಿ ನೆಟ್‌ವರ್ಕ್ ಪ್ರಾರಂಭವಾಗಲಿದ್ದು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳಿಗೂ ಬಿಎಸ್‌ಎನ್‌ಎಲ್ ಹಾಗೂ ಕೇಬಲ್ ಆಪರೇಟರ್‌ಗಳ ಸಹಯೋಗದೊಂದಿಗೆ ಪಿಪಿಪಿ ಮಾದರಿಯಲ್ಲಿ ಡಿಜಿಟಲ್ ಸಂಪರ್ಕ ಪಡೆಯಲು ಕ್ರಮ ಕೈಗೊಳ್ಳಲಾಗುವುದು. ಈ ನಿಟ್ಟಿನಲ್ಲಿ ಶೀಘ್ರದಲ್ಲಿಯೇ ಜಿಪಂ ಸಿಇಒ, ಗ್ರಾ.ಪಂ. ಪಿಡಿಒ ಗಳು ಹಾಗೂ ಕೇಬಲ್ ಆಪರೇಟರ್‌ಗಳೊಂದಿಗೆ ಸಭೆ ಕೈಗೊಳ್ಳುವಂತೆ ಸಚಿವ ಎ. ನಾರಾಯಣಸ್ವಾಮಿ ಅವರು ಬಿಎಸ್‌ಎನ್‌ಎಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ 189 ಗ್ರಾ.ಪಂ. ಗಳ ಪೈಕಿ ಇದುವರೆಗೆ ಕೇವಲ 79 ಗ್ರಾ.ಪಂ. ಗಳಿಗೆ ಮಾತ್ರ ಬಿಎಸ್‌ಎನ್‌ಎಲ್ ಡಿಜಿಟಲ್ ಕನೆಕ್ಟಿವಿಟಿ ನೀಡಲಾಗಿದೆ, ಉಳಿದಂತೆ ಇನ್ನೂ 110 ಗ್ರಾ.ಪಂ. ಗಳಿಗೆ ಕನೆಕ್ಟಿವಿಟಿ ಆಗಿಲ್ಲ. ಇಡೀ ದೇಶದಲ್ಲಿ ಡಿಜಿಟಲ್ ಆಡಳಿತ ಕೊಡಬೇಕು ಎಂಬುದು ಪ್ರಧಾನಮಂತ್ರಿಗಳ ಆಶಯವಾಗಿದ್ದು, ಆದರೆ ಇದಕ್ಕೆ ಬಿಎಸ್‌ಎನ್‌ಎಲ್ ನಿಂದ ಸೂಕ್ತ ಸ್ಪಂದನೆ ಸಿಗುತ್ತಿಲ್ಲ. ಇತ್ತೀಚೆಗೆ ಜಿ20 ಶೃಂಗ ಸಭೆಯ ಸಂದರ್ಭದಲ್ಲಿ ಬಿಎಸ್‌ಎನ್‌ಎಲ್ ನ ಉನ್ನತ ಅಧಿಕಾರಿಯೊಬ್ಬರು, ಯಾವುದೇ ಗ್ರಾಮ ಪಂಚಾಯತ್‌ನಲ್ಲಿ ಡಿಜಿಟಲ್ ಸಂಪರ್ಕ ಇಲ್ಲದಿದ್ದಲ್ಲಿ, ನಮ್ಮ ಗಮನಕ್ಕೆ ತನ್ನಿ, ಅನುಷ್ಠಾನಗೊಳಿಸಲು ನಾವು ಸಿದ್ದರಿದ್ದೇವೆ ಎಂಬುದಾಗಿ ಹೇಳಿದ್ದರು. ಆದರೆ ಸ್ಥಳೀಯ ಬಿಎಸ್‌ಎನ್‌ಎಲ್ ಅಧಿಕಾರಿಗಳು ಈ ನಿಟ್ಟಿನಲ್ಲಿ ಸೂಕ್ತ ಸಿದ್ಧತೆಗಳನ್ನು ಮಾಡಿಕೊಂಡಂತೆ ಕಂಡುಬಂದಿಲ್ಲ, ಹೀಗಾಗಿ ಬಿಎಸ್‌ಎನ್‌ಎಲ್ ಅಧಿಕಾರಿಗಳು ತಮ್ಮ ಕಾರ್ಯವೈಖರಿಯನ್ನು ಬದಲಾಯಿಸಿಕೊಳ್ಳುವ ಅಗತ್ಯವಿದೆ. ಜಿಲ್ಲೆಯ ಎಲ್ಲ ಗ್ರಾ.ಪಂ. ಗಳು ಡಿಜಿಟಲ್ ಆಡಳಿತ ವ್ಯವಸ್ಥೆ ಹೊಂದಲು, ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

ಬಿಎಸ್‌ಎನ್‌ಎಲ್ ನ ಜನರಲ್ ಮ್ಯಾನೇಜರ್, ದಾವಣಗೆರೆಯ ಧನಂಜಯ ಕುಮಾರ್ ತ್ರಿಪಾಠಿ ಮಾತನಾಡಿ, ಚಿತ್ರದುರ್ಗ ಜಿಲ್ಲೆಯಲ್ಲಿ 43 ಟವರ್‌ಗಳಲ್ಲಿ ಶೀಘ್ರ 4ಜಿ ನೆಟ್‌ವರ್ಕ್ ಪ್ರಾರಂಬಿಸಲಾಗುವುದು, ಚಳ್ಳಕೆರೆ–03, ಚಿತ್ರದುರ್ಗ–7, ಹಿರಿಯೂರು–06, ಹೊಳಲ್ಕೆರೆ–7, ಹೊಸದುರ್ಗ–12 ಹಾಗೂ ಮೊಳಕಾಲ್ಮೂರು– 8 ಟವರ್‌ಗಳಲ್ಲಿ 4ಜಿ ಪ್ರಾರಂಭಿಸಲಾಗುವುದು. ಉಳಿದಂತೆ ಜಿಲ್ಲೆಯಲ್ಲಿ ಯಾವುದೇ ಸಿಗ್ನಲ್ ಲಭ್ಯವಿರದ ಪ್ರದೇಶಗಳನ್ನು ಗುರುತಿಸಿ, ಇನ್ನೂ 112 ಟವರ್‌ಗಳ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ, ಅನುಮೋದನೆ ಬಂದ ಬಳಿಕ, ಈ ಟವರ್‌ಗಳ ನಿರ್ಮಾಣ ಪೂರ್ಣಗೊಳಿಸಿ, 4ಜಿ ನೆಟ್‌ವರ್ಕ್ ನೀಡಲಾಗುವುದು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಕೆಪಿಟಿಸಿಎಲ್ ವಲಯ ಇಂಜಿನಿಯರ್ ದಿವಾಕರ್, ಬಿಎಸ್‌ಎನ್‌ಎಲ್ ದಾವಣಗೆರೆಯ ಡೆಪ್ಯುಟಿ ಜನರಲ್ ಮ್ಯಾನೇಜರ್ ಗೋಪಾಲ್ ಪಿ, ಚಿತ್ರದುರ್ಗದ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಜನಾರ್ಧನ್ ಸೇರಿದಂತೆ ಬಿಎಸ್‌ಎನ್‌ಎಲ್ ಮತ್ತು ಕೆಪಿಟಿಸಿಎಲ್‌ನ ವಿವಿಧ ಅಧಿಕಾರಿಗಳು ಭಾಗವಹಿಸಿದ್ದರು.

## ಪಾಠಶಾಲೆವತಿಯಿಂದ ವಿಶ್ವ ಸಂಸ್ಕೃತಿ ದಿನಾಚರಣೆ

» ಚಿತ್ರದುರ್ಗ



ಶ್ರೀ ಉಜ್ಜಯನಿ ಜಗದ್ಗುರು ವಿದ್ಯಾಪೀಠ ಸಂಸ್ಕೃತ ಪಾಠಶಾಲೆವತಿಯಿಂದ ವಿಶ್ವ ಸಂಸ್ಕೃತಿ ದಿನಾಚರಣೆ ಮತ್ತು ಸಂಸ್ಕೃತ ಸಪ್ತಾಹವನ್ನು ಆಚರಿಸಲಾಯಿತು.

ನಗರದ ಉಜ್ಜಯಿನಿ ಮಠದಲ್ಲಿ ಗುರುವಾರ ರಾತ್ರಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಉಜ್ಜಯನಿ ಮಠದ ನಿಯೋಜಿತ ಉತ್ತರಾಧಿಕಾರಿಯಾದ ಅಭೀಷೇಕ ದೇವರು ಮಾತನಾಡಿ, ಸಂಸ್ಕೃತ ನಮ್ಮ ಪುರಾತನವಾದ ಭಾಷೆಯಾಗಿದೆ, ಇದನ್ನು ಇಂದಿನ ದಿನದಲ್ಲಿ ನಿರ್ಲಕ್ಷ್ಯ ಮಾಡಲಾಗುತ್ತಿದೆ, ಪರ ಭಾಷೆ ವ್ಯಾಮೋಹಕ್ಕೆ ಬಿದ್ದು ನಮ್ಮ ಪುರಾತನವಾದ ಭಾಷೆಯನ್ನು ನಿರ್ಲಕ್ಷ್ಯ ಮಾಡಲಾಗುತ್ತಿದೆ ಎಂದು ವಿಷಾಧಿಸಿದರು.

ಇದೇ ಸಂದರ್ಭಧಲ್ಲಿ ಶಾಲೆಯಲ್ಲಿ ಅಬ್ಯಾಸ ಮಾಡಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅಂಕ ಪಟ್ಟಿಗಳನ್ನು ಶ್ರೀ ಉಜ್ಜಯಿನಿ ಜಗದ್ಗುರು ವಿದ್ಯಾ ಪೀಠದ ಕಾರ್ಯದರ್ಶಿ ಸಿ.ಎಂ ಮನೋಜ್ ವಿತರಣೆ ಮಾಡಿದರು.ಸಂಸ್ಕೃತ ಪಾಠಶಾಲೆಯಲ್ಲಿ ಹೆಚ್ಚು ಅಂಕವನ್ನು ಪಡೆದ ವಿದ್ಯಾರ್ಥಿಗಳಿಗೆ ಶ್ರೀ ಉಜ್ಜಯಿನಿ ಜಗದ್ಗುರು ವಿದ್ಯಾ ಪೀಠದ ಅಧ್ಯಕ್ಷರಾದ ಈಶ್ವರ ಪ್ರಸಾದ್ ವಿತರಣೆ ಮಾಡಿದರು. ಕಾರ್ಯಕ್ರಮದಲ್ಲಿ ರಾಮಲಿಂಗಪ್ಪ, ನಾಗರಾಜ್, ಪೋಷಕರಾದ ಶಾಂಭವಿ, ಸುಮನ ಭಾಗವಹಿಸಿದ್ದರು.ಶಿಲ್ಪ ಸ್ವಾಗತಿಸಿದರು, ಜಲಜಾಕ್ಷಿ ಪ್ರಸ್ತಾವಿಕವಾಗಿ ಮಾತನಾಡಿದರೆ ದೇವರಾಜ್ ಕಾರ್ಯಕ್ರಮ ನಿರೂಪಿಸಿದರು. ನಂತರ ಮಕ್ಕಳಿಗೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.ಇದಕ್ಕೂ ಮುನ್ನಾ ಬೆಳಿಗ್ಗೆ ವಿಶ್ವ ಸಂಸ್ಕೃತಿ ದಿನಾಚರಣೆ ಮತ್ತು ಸಂಸ್ಕೃತ ಸಪ್ತಾಹದ ಅಂಗವಾಗಿ ಜಾಥಾವನ್ನು ನಡೆಸಲಾಯಿತು. ಜಾಥಾವು ಉಜ್ಜಯನಿ ಮಠದಿಂದ ಪ್ರಾರಂಭವಾಗಿ ರಂಗಯ್ಯನ ಭಾಗಿಲು, ಜೋಗಿಮಟ್ಟಿ ರಸ್ತೆ, ಬುದ್ದ ನಗರದ ಮೂಲಕ ಮರಳಿ ಉಜ್ಜಯಿನಿ ಮಠಕ್ಕೆ ಬರಲಾಯಿತು.ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕರಾದ ಜಲಜಾಕ್ಷಿ, ದೇವರಾಜ್, ಶಿಲ್ಪ ಹಾಗೂ ವಾಸುದೇವ ರೆಡ್ಡಿ ಶಾಲಾ ಶಿಕ್ಷಕರು ಮತ್ತು ಮಕ್ಕಳು ಭಾಗವಹಿಸಿದ್ದರು. 2022 ಮತ್ತು 2023ನೇ ಸಾಲಿನಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಪ್ರಥಮ 3ನೇ ತರಗತಿಯಲ್ಲಿ ಪ್ರಥಮ ಜೀವಿತಾ, ದ್ವಿತೀಯ ಶುಭಾ, ತೃತೀಯ ಭಾವನಾ ಕಾವ್ಯ 2ನೇ ತರಗತಿಯಲ್ಲಿ ಪ್ರಥಮ ರಕ್ಷಿತಾ, ದ್ವಿತೀಯ ನಾಗಶ್ರೀ ತೃತೀಯ ಇಶಾಂತ ಪಡೆದಿದ್ದಾರೆ.

## ಬಾಲಕಿಯರ ಕಬಡ್ಡಿ ಪಂದ್ಯಾವಳಿಯಲ್ಲಿ ಮಾತೃಶ್ರೀ ವಿದ್ಯಾಸಂಸ್ಥೆಯ ಮಕ್ಕಳಿಗೆ ದ್ವಿತೀಯ ಸ್ಥಾನ




» ಚಿತ್ರದುರ್ಗ

ನಗರ ಮಟ್ಟದ ಕ್ರೀಡಾಕೂಟದಲ್ಲಿ ಮಾತೃಶ್ರೀ ವಿದ್ಯಾಸಂಸ್ಥೆಯ ಮಕ್ಕಳು ಬಾಲಕಿಯರ ಕಬಡ್ಡಿ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದು, ವೈಯಕ್ತಿಕ ಆಟಗಳಲ್ಲಿ ಗಗನ್ ಸಂದೀಪ್ ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಪಡೆದು ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಾತೃಶ್ರೀ ವಿದ್ಯಾಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಡಾ.ವಿ.ಎಲ್.ಪ್ರಶಾಂತ್, ಆಡಳಿತಾಧಿಕಾರಿ ವಿ.ಎಲ್.ಪ್ರವೀಣ್, ಮುಖ್ಯ ಶಿಕ್ಷಕ ಆರ್.ಮಹಾಂತೇಶ್, ಕೋಆರ್ಡಿನೇಟರ್ ಲಕ್ಷ್ಮಿದೇಸಾಯಿ ಮತ್ತು ಶಾಲೆಯ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

**ಪ್ರಮುಖ ಸುದ್ದಿ**

# ವಿಶ್ವಕರ್ಮ ಕುಲಶಾಸ್ತ್ರ ಅಧ್ಯಯನಕ್ಕೆ ಮಾಹಿತಿ ಇದ್ದರೆ ಕೊಡಿ

» ಚಿತ್ರದುರ್ಗ



ವಿಶ್ವಕರ್ಮ ಸಮಾಜಕ್ಕೆ ಸಂಬಂಧಪಟ್ಟಂತೆ ಯಾವುದಾದರೂ ಮಾಹಿತಿ ಇದ್ದಲ್ಲಿ ನಮಗೆ ತಲುಪಿಸುವುದರ ಮೂಲಕ ಸರ್ಕಾರಕ್ಕೆ ಕುಲಶಾಸ್ತ್ರ ಅಧ್ಯಯನಕ್ಕೆ ಸಹಕಾರ ನೀಡುವಂತೆ ಮೈಸೂರು ಮಾನಸ ಗಂಗೋತ್ರಿಯ ಅಧ್ಯಯನ ಕೇಂದ್ರದ ಸಂಶೋಧನ ಸಹಾಯಕರಾದ ಡಾ.ಮಹದೇವ ಸಮಾಜದ ಬಾಂಧವರಲ್ಲಿ ಮನವಿ ಮಾಡಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಶನಿವಾರ ಅಖಿಲ ಭಾರತ ವಿಶ್ವಕರ್ಮ ಪರಿಷತ್ ಚಿತ್ರದುರ್ಗ ಜಿಲ್ಲಾ ಘಟಕ ಮತ್ತು ವಿಶ್ವಕರ್ಮ ಸಮಾಜ ಹಾಗೂ ಜಿಲ್ಲಾ ವಿಶ್ವಕರ್ಮ ಸಮಾಜದವತಿಯಿಂದ ಹಮ್ಮಿಕೊಂಡಿದ್ದ ಕುಲಶಾಸ್ತ್ರ ಅಧ್ಯಯನದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿಶ್ವಕರ್ಮದಲ್ಲಿ 141 ಉಪ ಜಾತಿಗಳಿದ್ದು, ವಿಶ್ವಕರ್ಮ ಸಮಾಜವನ್ನು ನಿರ್ಮಾಣ ಮಾಡಲಾಗಿದೆ. ಕರ್ನಾಟಕ ಸರ್ಕಾರದ ಹಿಂದುಳಿದ ವರ್ಗಗಳ ಇಲಾಖೆವತಿಯಿಂದ ವಿಶ್ವಕರ್ಮ ಮತ್ತು ಅದರ ಉಪ ಜಾತಿಗಳ ಕುಲಶಾಸ್ತ್ರ ಅಧ್ಯಯನವನ್ನು ಸರ್ಕಾರವು ಮೈಸೂರು ವಿಶ್ವ ವಿದ್ಯಾಲಯಕ್ಕೆ ವಹಿಸಿದೆ. ಇದರಂತೆ ಸದರಿ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಡಿ.ಸಿ. ನಂಜುಂಡಪ್ಪರವರ ಇವರ ನೇತೃತ್ವದಲ್ಲಿ ಆಧ್ಯಯನ ಮಾಡಲಾಗುತ್ತಿದೆ ಎಂದರು.ಈ ಹಿನ್ನಲೆಯಲ್ಲಿ ಅಧ್ಯಯನ ಸಮಿತಿಯೂ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭೇಟಿ ನೀಡುವುದರ ಮೂಲಕ ಅಲ್ಲಿನ ವಿಶ್ವಕರ್ಮ ಸಮಾಜದವರನ್ನು ಭೇಟಿ ಮಾಡಿ ಅಲ್ಲಿನ ಆಚಾರ ವಿಚಾರವನ್ನು ಅಧ್ಯಯನ ಮಾಡಲಾಗುವುದು. ಈ ಸಮುದಾಯದಲ್ಲಿ ಪಂಚವೃತ್ತಿಗಳಾದ ಕಮ್ಮಾರಿಕೆ, ಅಕ್ಕಸಾಲಿಕೆ, ಬಡಗಿತನ, ಶಿಲ್ಪಕಲೆ ಹಾಗೂ ಕಂಚುಗಾರಿಕೆಯನ್ನು ಒಳಗೊಂಡಿದೆ. ಈಗಾಗಲೇ ಮೈಸೂರು, ಮಂಡ್ಯ, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳಿಗೆ ಭೇಟಿ ನೀಡುವುದರ ಮೂಲಕ ಅಲ್ಲಿನ ವಿಶ್ವಕರ್ಮ ಸಮಾಜದ ಬಗ್ಗೆ ವಾಸ್ತುಸ್ಥಿತಿಯನ್ನು ತಿಳಿಯಲಾಗಿದೆ. ಚಿತ್ರದುರ್ಗದಲ್ಲಿಯೂ ಸಹಾ ವಿಶ್ವಕರ್ಮ ಕುಟುಂಬದವರ ಸಾಮಾಜಿಕ, ಆರ್ಥಿಕ, ಸ್ಥಿತಿ–ಗತಿ ಆಚಾರ, ವಿಚಾರ ಪೂಜೆ, ಪುನಸ್ಕಾರ, ರಾಜಕೀಯ, ಶೈಕ್ಷಣಿಕ ಪರಿಸ್ಥಿತಿ, ಧಾರ್ಮಿಕವಾಗಿ ಇರುವ ಪದ್ದತಿಯನ್ನು ತಿಳಿಯದು ನಮ್ಮ ಉದ್ದೇಶವಾಗಿದೆ ಎಂದು ಮಹದೇವ ತಿಳಿಸಿದರು.ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಭೇಟಿ ಮಾಡುವುದರ ಮೂಲಕ ವಿಶ್ವಕರ್ಮ ಸಮಾಜದ ಬಗ್ಗೆ ಅಧ್ಯಯನ ಮಾಡಿ ಅದನ್ನು ವರದಿ ರೂಪದಲ್ಲಿ ತಯಾರು ಮಾಡಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಅಲ್ಲಿಂದ ಮುಂದೆ ಅದನ್ನು ಜಾರಿ ಮಾಡುವುದು ಸರ್ಕಾರದ ಕೆಲಸವಾಗಿದೆ ಸರ್ಕಾರದ ಮೇಲೆ ಒತ್ತಡ ತರುವುದು ಸಮಾಜದ ಕೆಲಸವಾಗಿದೆ ಎಂದ ಅವರು, ನಿಮ್ಮ ಸಮಾಜದ ಬಗ್ಗೆ ನಿಮ್ಮಲ್ಲಿ ಏನಾದರೂ ದಾಖಲಾತಿಗಳು ಇದ್ದಲ್ಲಿ ನಮಗೆ ತಲುಪಿಸುವ ಕಾರ್ಯವನ್ನು ಮಾಡಿ ಇದರಿಂದ ನಮ್ಮ ಕುಲಶಾಸ್ತ್ರ ಅಧ್ಯಯನಕ್ಕೆ ಅನುಕೂಲವಾಗಲಿದೆ, ಇಲ್ಲಿ ಕೋಟೆ ಇದೆ ಅದರಲ್ಲಿ ನಿಮ್ಮ ಸಮಾಜದವರ ಕೊಡುಗೆ ಏನಾದರೂ ಇದೆಯೇ ಇದೇ ರೀತಿ ಚಂದ್ರವಳ್ಳಿಯಲ್ಲಿ ಇರುವಂತ ಗುಹೆಯಲ್ಲಿ ಏನಾದರೂ ಇದೆಯೇ ಎಂಬುದನ್ನು ತಿಳಿಸಿ ನಮಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನೀವು ಹೇಳಿದ್ದನ್ನು ದಾಖಲಾತಿಯನ್ನು ಮಾಡಲಾಗುವುದು, ಅಲ್ಲದೆ ರೆಕಾರ್ಡ ಮಾಡುವುದರ ಮೂಲಕ ಇದನ್ನು ದಾಖಲಾತಿಯಾಗಿ ಪರಿಣಿಮಿಸಲಾಗುವುದು. ಈಗ ನಿಮ್ಮಲ್ಲಿ ದಾಖಲಾತಿಗಳು ಇಲ್ಲದಿದ್ದರೆ ಮುಂದೆ ಏನಾದರೂ ಸಿಕ್ಕಲ್ಲಿ ಅದನ್ನು ನಮ್ಮ ದೂರವಾಣಿ ಸಂಖ್ಯೆ 6360409568 ಇದಕ್ಕೆ ಕಳುಹಿಸಿ ಕೊಟ್ಟರೆ ಅದನ್ನು ಪರಿಗಣಿಸಲಾಗುವುದೆಂದು ತಿಳಿಸಿದರು.

## ಆರೋಗ್ಯವೇ ಸಂಪತ್ತು ಸರಳ ಆರೋಗ್ಯ ಸಲಹೆಗಳು



ಆರೋಗ್ಯವೇ ಸಂಪತ್ತು ಎಂಬ ಮಾತನ್ನು ನೀವು ಕೇಳಿರಬಹುದು. ಏಕೆಂದರೆ ಒಬ್ಬ ವ್ಯಕ್ತಿಗೆ ಆರೋಗ್ಯವಿದ್ದಲ್ಲಿ ಕಠಿಣ ಪರಿಶ್ರಮ ಮತ್ತು ದುಡಿಮೆಯ ಮೂಲಕ ಹಣವನ್ನು ಗಳಿಸಬಹುದು. ಹಾಗಾಗಿ ಮೊದಲು ಆರೋಗ್ಯವಾಗಿರಲು ಏನು ಮಾಡಬೇಕು ಎಂದು ತಿಳಿದುಕೊಳ್ಳಬೇಕು. ಈ ಬಗ್ಗೆ ಆನಂದ ವಠಾರ್ ಎಂಬವರ ಖಾತೆಯಲ್ಲಿ ಹಂಚಿಕೊಂಡಿರುವ ಈ ಪೋಸ್ಟ್ ನಲ್ಲಿ ಸರಳವಾದ ಆರೋಗ್ಯಕರ ಸಲಹೆಗಳನ್ನು ನೀಡಿದ್ದಾರೆ.

### ಸರಳ ಆರೋಗ್ಯ ಸಲಹೆಗಳೇನು? ಇಲ್ಲಿದೆ ಮಾಹಿತಿ:

–ಈ ಎರಡನ್ನು ಆಗಾಗ ಪರೀಕ್ಷಿಸಿಕೊಳ್ಳಿ: ಒಮ್ಮೆ ಶುರು ಆದರೆ ಕೊನೆವರೆಗೂ ಇರುವ ಕಾಯಿಲೆಗಳು ಎಂದರೆ ಅದು ಬಿಪಿ ಮತ್ತು ಶುಗರ್. ಹಾಗಾಗಿ ಅದನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವುದು ಅಗತ್ಯ. ಬಿಡುವಿದ್ದಾಗ ಅಥವಾ ಅದಕ್ಕಾಗಿಯೇ ಸಮಯ ಮಾಡಿಕೊಂಡು ಬಿಪಿ, ಶುಗರ್ ಅನ್ನು ಆಗಾಗ ಪರೀಕ್ಷಿಸಿಕೊಳ್ಳಿ.

–ಈ ನಾಲ್ಕನ್ನು ಸಾಧ್ಯವಾದಷ್ಟು ಕಡಿಮೆ ಬಳಸಿ: ದಿನ ಬಳಕೆಯ ಪದಾರ್ಥಗಳಲ್ಲಿ ಸಕ್ಕರೆ, ಉಪ್ಪು ಹೆಚ್ಚಾಗಿ ಬಳಸುವುದನ್ನು ಕಡಿಮೆ ಮಾಡಿ ಯಾವುದಾದರೂ ಅಗತ್ಯಕ್ಕಿಂತ ಹೆಚ್ಚಾದರೆ ಹಾಳು. ಹಾಗಾಗಿ ಎಷ್ಟು ಬೇಕೋ ಅಷ್ಟೇ ಬಳಸಿ. ಅದೆಲ್ಲದರ ಜೊತೆಗೆ ಡೈರಿ ಉತ್ಪನ್ನಗಳು, ಪಿಷ್ಠ ಪದಾರ್ಥಗಳು ತಿನ್ನುವುದನ್ನು ಕಡಿಮೆ ಮಾಡಿ.

ಈ ನಾಲ್ಕನ್ನು ಹೆಚ್ಚು ಬಳಸಿ: ಪ್ರತಿದಿನ ನಿಮ್ಮ ಊಟ ತಿಂಡಿಯಲ್ಲಿ ಅಗತ್ಯವಾಗಿ ಹಸಿರು ಸೊಪ್ಪು, ತರಕಾರಿಗಳು, ಬೀಜಗಳು, ಹಣ್ಣುಗಳು ಬಳಸಿ. ಇವು ನಿಮ್ಮ ಆರೋಗ್ಯಕ್ಕೆ ಮುಖ್ಯವಾಗಿದೆ.

–ಈ ಮೂರನ್ನು ಮರೆತು ಬಿಡಿ: ಜೀವನದಲ್ಲಿ ನೀವು ಆರೋಗ್ಯವಾಗಿರಬೇಕು ಎಂದಲ್ಲಿ ಮೊದಲು ನಿಮ್ಮ ವಯಸ್ಸಿನ ಬಗ್ಗೆ, ಕಳೆದು ಹೋದ ದಿನಗಳ ಬಗ್ಗೆ, ಮತ್ತು ಯಾರೊಂದಿಗಾದರೂ ದ್ವೇಷ ಕಟ್ಟಿಕೊಂಡಿದ್ದರೇ ಅವೆಲ್ಲವನ್ನು ಮರೆತು ಬಿಡಿ. ಇವೆಲ್ಲವೂ ನಿಮ್ಮ ಆರೋಗ್ಯವನ್ನು ಹಾಳು ಮಾಡುತ್ತವೆ.

ಈ ಮೂರನ್ನು ಹೊಂದಲು ಪ್ರಯತ್ನಿಸಿ: ಜೀವನದಲ್ಲಿ ಯಾವಾಗಲೂ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಧನಾತ್ಮಕ ಚಿಂತನೆ ಅತ್ಯಗತ್ಯ. ನಕಾರಾತ್ಮಕ ಚಿಂತನೆಗಳು ನಮ್ಮನ್ನು ಚಿಂತೆಗಳ ಕೂಪಕ್ಕೆ ತಳ್ಳಿ ಬಿಡುತ್ತದೆ ಇದರಿಂದ ಆಚೆ ಬರುವುದು ತುಂಬಾ ಕಷ್ಟ. ಹಾಗಾಗಿ ಆದಷ್ಟು ನಕಾರಾತ್ಮಕ ಚಿಂತೆ ಬಿಟ್ಟು ಸಕಾರಾತ್ಮಕ ಚಿಂತನೆಯನ್ನು ಮಾಡಿ. ಜೊತೆಗೆ ನಮ್ಮ ಒತ್ತಡ, ಚಿಂತೆ ಕಡಿಮೆ ಮಾಡಲು ಪ್ರೀತಿಸುವ ಕುಟುಂಬ, ನೈಜ ಮಿತ್ರರು ಇದ್ದಲ್ಲಿ ಸಂತೋಷವನ್ನು ಹುಡುಕಿಕೊಂಡು ಹೋಗಬೇಕೆಂದಿಲ್ಲ. ಖುಷಿ ಇದ್ದಲ್ಲಿ ಆರೋಗ್ಯವು ಜೊತೆಯಾಗುತ್ತದೆ.

ಆರೋಗ್ಯವಾಗಿರಲು ಮುಖ್ಯವಾಗಿ ಹೀಗೆ ಮಾಡಿ: ವಾರದಲ್ಲಿ ಒಂದು ದಿನವಾದರೂ ಉಪವಾಸ ಮಾಡಿ. ಇದರಿಂದ ದೇಹಕ್ಕೆ ಒಳ್ಳೆಯದು. ಆರೋಗ್ಯವಾಗಿರಲು ಉತ್ತಮ ಔಷಧವೆಂದರೆ ನಗು. ಇದರಿಂದ ನಿಮ್ಮ ಆತಂಕ ಮಾಯವಾಗುತ್ತದೆ ಜೊತೆಗೆ ಸಹಜವಾಗಿ ಆರೋಗ್ಯ ಸುಧಾರಿಸುತ್ತದೆ. ಇವೆಲ್ಲದರೊಂದಿಗೆ ದಿನನಿತ್ಯ ವ್ಯಾಯಾಮ/ಯೋಗ ಮಾಡಿ. ಇವು ನಿಮಗೆ ನಿರಾಳತೆ ನೀಡಿ. ದಿನ ಪೂರ್ತಿ ನಿಮ್ಮನ್ನು ಲವಲವಿಕೆಯಿಂದಿರಲು ಸಹಾಯ ಮಾಡುತ್ತದೆ. ಇದೆಲ್ಲದರ ಜೊತೆಗೆ ಆದಷ್ಟು ತೂಕ ಕಡಿಮೆ ಮಾಡಿಕೊಳ್ಳಿ. ಇದರಿಂದ ಫಿಟ್ ಆಗಿ ಇರುತ್ತೀರಿ. ಆರೋಗ್ಯವು ಜೊತೆಯಾಗುತ್ತದೆ.

–ಈ ಎರಡು ವಿಷಯಗಳಿಗೆ ಕಾಯಬೇಡಿ: ಮೊದಲನೇಯದು ರಾತ್ರಿ ಸಮಯದಲ್ಲಿ ನಿದ್ದೆ ಮಾಡಲು ನಿದ್ದೆ ಬರುವ ವರೆಗೆ ಕಾಯಬೇಡಿ. ಇದರಿಂದ ನಿಮ್ಮ ನಿದ್ದೆಗೆ ಅಡತಡೆ ಆಗುವುದರ ಜೊತೆಗೆ 8 ತಾಸು ಸರಿಯಾಗಿ ನಿದ್ರೆ ಮಾಡಲು ಸಾಧ್ಯವಾಗುವುದಿಲ್ಲ. ನಿದ್ರೆ ಸರಿಯಾಗಿ ಆಗದಿದ್ದಲ್ಲಿ ಆರೋಗ್ಯ ಕೆಡುತ್ತದೆ. ಕೆಲಸ ಮಾಡಿ ಬಂದಾಗ ಅಥವಾ ಸಮಯ ಸಿಕ್ಕಾಗ ವಿಶ್ರಾಂತಿ ತೆಗೆದುಕೊಳ್ಳಲು ಮರೆಯದಿರಿ. ಸುಸ್ತಾಗುವವರೆಗೆ ಕಾಯಬೇಡಿ. ಆಗ ನಿಮ್ಮ ದೇಹಕ್ಕೂ ಮತ್ತು ಮನಸ್ಸಿಗೂ ಆನಂದ ದೊರೆಯುತ್ತದೆ. ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಿ ಆರೋಗ್ಯವೇ ಭಾಗ್ಯ.

# ಒತ್ತಡದ ಜೀವನದಲ್ಲಿ ಹೃದಯದ ಮೇಲೆ ಅತಿಯಾದ ಪ್ರಭಾವ

» ನಾಯಕನಹಟ್ಟಿ

ಆಯುರ್ವೇದ ಆಹಾರ, ವಿಹಾರ ಪದ್ಧತಿ ಮತ್ತು ಜೀವನ ಕ್ರಮ ಯೋಗಾಸನಗಳಿಂದ ದೈಹಿಕ ಮತ್ತು ಹೃದಯದ ಆರೋಗ್ಯ ಕಾಪಾಡಿಕೊಳ್ಳಬಹುದು, ಪ್ರಾಣಾಯಾಮ ಮಾಡುವುದರಿಂದ ರಕ್ತದೊತ್ತಡ ಶ್ವಾಸಕ್ರಿಯೆ ನಿಯಂತ್ರಿಸಬಹುದು,

ದ್ಯಾನ ಮಾಡುವುದರಿಂದ ರಕ್ತದ ಒತ್ತಡ, ಮನಸ್ಸನ್ನು ಏಕಾಗ್ರತೆಗೊಳಿಸಿ ಸಂಪೂರ್ಣ ಶರೀರದ ಆರೋಗ್ಯ ಕಾಪಾಡಿಕೊಳ್ಳಬಹುದು ಒತ್ತಡದ ಜೀವನದಲ್ಲಿ ಹೃದಯದ ಮೇಲೆ ಅತಿಯಾದ ಪ್ರಭಾವ ಬೀರುವ ಸಾದ್ಯತೆ ಇದೆ. ದೇಹ, ಮನಸ್ಸು, ಬುದ್ಧಿ, ಆತ್ಮ ಎಲ್ಲವೂಗಳ ಸಂಪೂರ್ಣ ಜ್ಞಾನ ಇರುವುದು ತುಂಬಾ ಅವಶ್ಯಕ ಶರೀರ ಮತ್ತು ಆತ್ಮಶುದ್ಧಿ ಆಯುರ್ವೇದ ಪದ್ಧತಿಯಿಂದ ಮಾತ್ರ ಸಾಧ್ಯ. ನಮ್ಮ ಹೃದಯಕ್ಕೆ ರಕ್ತವನ್ನು ಪೂರೈಸುವ ಅಪದಮನಿಯು, ಕೊಲೆಸ್ಟ್ರಾಲ್‌ನ ಶೇಕರಣೆಯಿಂದ ಅಥವಾ ಕೆಲವು ಸಂದರ್ಭಗಳಲ್ಲಿ ರಕ್ತ ಹೆಪ್ಪುಗಟ್ಟುವಿಕೆಯಿಂದ ಹೃದಯಕ್ಕೆ ರಕ್ತ ಚಲನೆಯಿಂದನಿಂತುಹೋಗಿಹೃದಯಘಾತ ಸಂಭವಿಸುತ್ತದೆ ಈ ರಕ್ತ ಹೆಪ್ಪುಗಟ್ಟುವುದು ಅಥವಾ ರಕ್ತಚಲನೆ ನಿಲ್ಲುವುದರಿಂದ ಹೃದಯಘಾತ ಸಂಭವಿಸುತ್ತದೆ.

ಈ ರೀತಿ ರಕ್ತ ಹೆಪ್ಪುಗಟ್ಟುವುದು ರಕ್ತಚಲನೆ ನಿಲ್ಲುವುದರಿಂದ ಹೃದಯಕ್ಕೆ ಬೇಕಾದ ರಕ್ತ ಸಿಗದೆ ಹೃದಯವು ಕಾರ್ಯಚರಣೆಯನ್ನು ನಿಲ್ಲಿಸುತ್ತದೆ ಇದರಿಂದ ಹೃದಯಘಾತ ಸಂಭವಿಸುತ್ತದೆ. ಹೃದಯ ಎಂಬುವುದು ಕುಟುಂಬದ ಆಸ್ತಿ ಇದ್ದಹಾಗೆ ಸಣ್ಣ ಹೃದಯ ನಾಳಗಳು ಹೆಚ್ಚಿನ ಮಟ್ಟದ ಕೊಲೆಸ್ಟ್ರಾಲ್ ಮಟ್ಟದ ಉತ್ತಮ ಕೊಲೆಸ್ಟ್ರಾಲ್ ರಕ್ತದ ಒತ್ತಡ, ಬೊಜ್ಜು ಕಳಪೆ ಆಹಾರ ಮತ್ತು ದೂಮಪಾನದಿಂದ ಸಂಭವಿಸಬಹುದು ನಮ್ಮ ಜೀವನ ಪದ್ಧತಿಯಿಂದ ಹಾಗೂ ಆಹಾರ ಪದ್ಧತಿ ಚನ್ನಾಗಿ ಇದ್ದರೆ ಹೃದಯಘಾತ ತಪ್ಪಿಸಿಕೊಳ್ಳಬಹುದು. ಹೃದಯಘಾತ ಸಂಭವಿಸಿದಾಗ ಎಡಭಾಗದ ಎದೆಯಲ್ಲಿ ನೋವು ಕಾಣಿಸಿಕೊಳ್ಳುತ್ತದೆ. ಆದರೆ ಎಲ್ಲರಿಗೂ ಈ ರೀತಿ ಆಗಬೇಕಿಲ್ಲ ನೀವು ಉತ್ತಮ ಆಹಾರವನ್ನು ಸೇವಿಸಿದರೆ ಹೃದ್ರೋಗ ಬಿಡಿ ಎಲ್ಲಾ ರೋಗದಿಂದ ಮುಕ್ತರಾಗಬಹುದು



ನಾವು ತಿನ್ನುವ ಆಹಾರವು ನಿಮ್ಮ ದೇಹಕ್ಕೆ ಬಹಳ ಮುಖ್ಯವಾಗಿದೆ.

ಏಕೆಂದರೆಇದುಅಂಗಾಂಗಗಳದೈನಂದಿನ ಕಾರ್ಯನಿರ್ವಹಣೆಗೆ ಅಗತ್ಯವಾದ ಇಂಧನವನ್ನು ತೊಡಗಿಸುತ್ತದೆ. ಈಗಾಗಿ ಹೃದಯವನ್ನು ಆರೋಗ್ಯವಾಗಿಡುವ ಆಹಾರವನ್ನು ನಾವು ಸೇವಿಸಿದರೆ, ಉತ್ತಮವಾದ ಹಣ್ಣುಗಳನ್ನು ಸೇವಿಸಬೇಕು, ಇನ್ನು ಹಸಿರು ತರಕಾರಿಗಳನ್ನು ಸೇವನೆ ಮಾಡುವುದು ಉತ್ತಮ ಇನ್ನು ಸಂಸ್ಕರಿಸಿದ ಜಂಗ್‌ಫುಡ್‌ಗಳಿಂದ ದೂರ ಇರುವುದು ಒಳ್ಳೆಯದು. ಪ್ರತಿದಿನ ನಿಯಮಿತವಾಗಿ ವ್ಯಾಯಾಮ ಮಾಡುವುದರಿಂದ ನಿಮ್ಮ ದೇಹದ ಆಕಾರವನ್ನು ಸಮತೋಲನದಲ್ಲಿ ಇಡಲು ಸಹಾಯ ಮಾಡುತ್ತದೆ. ಮಾತ್ರವಲ್ಲ ನಿಮ್ಮ ದೇಹಕ್ಕೆ ಹಲವಾರು ಆರೋಗ್ಯ ಪ್ರಯೋಜನಗಳನ್ನು ಒದಗಿಸುತ್ತದೆ. ಹೌದು ದಿನನಿತ್ಯ ಸುಮಾರು 20 ನಿಮಿಷ ಒಂದು ವಾರದಲ್ಲಿ ಒಟ್ಟು 150 ನಿಮಿಷಗಳ ವ್ಯಾಯಾಮಗಳಿಂದ ಅಧಿಕ ರಕ್ತದೊತ್ತಡ, ಮದುಮೇಹ, ಹೃದ್ರೋಗದಿಂದ ಬಳಲುತ್ತಿರುವ ವ್ಯಕ್ತಿಯನ್ನು ರಕ್ಷಿಸುತ್ತದೆ ಎಂದು ತಜ್ಞರು ಹೇಳುತ್ತಾರೆ.

ಹೀಗಾಗಿ ವ್ಯಾಯಾಮದ ಮೂಲಕ ಆರೋಗ್ಯವನ್ನು ಉತ್ತಮವಾಗಿ ಇಟ್ಟುಕೊಳ್ಳಬಹುದು. ಮದ್ಯಪಾನ ಬಿಟ್ಟುಬಿಡಿ, ಹೃದಯಘಾತದ ಪ್ರಾಥಮಿಕ ಅಪಾಯಕಾರಿ ಅಂಶಗಳಲ್ಲಿ ಮದ್ಯಪಾನ ಕೂಡ ಹೌದು.

ಒಂದು ಹೃದಯಘಾತ ಸಂಭವಿಸಿದ ಅನೇಕರ ಪೈಕಿ ಮದ್ಯಪಾನದಂತಹ ಒಂದಿದವರಿಗೆ ಅಪಾಯ ಜಾಸ್ತಿ ಎಂದು ಸಮೀಕ್ಷೆಯಿಂದ ತಿಳಿದುಬಂದಿದೆ. ಹೆಚ್ಚು ಆಲ್ಕೋಹಾಲ್ ಕುಡಿಯುವುದು ಹೃದಯಕ್ಕೆ ಎಂದೂ ಒಳ್ಳೆಯದಲ್ಲ. ಈಗಾಗಿ ಹೃದಯಘಾತವನ್ನು ತಡೆಗಟ್ಟಲು ಆಲ್ಕೋಹಾಲ್ ಸೇವನೆಯನ್ನು ತ್ಯಜಿಸಬೇಕು ಮದ್ಯಪಾನ ಬಿಡುವ ಮೂಲಕ ಆರೋಗ್ಯಕರ ಜೀವನವನ್ನು ಹೊಂದಬಹುದು. ಹೃದಯಘಾತ ಅಥವಾ ತಂಬಾಕು ಸೇವನೆ ನಿಮ್ಮ ಹೃದಯದ ಆರೋಗ್ಯದ ಮೇಲೆ ಹಾನಿಯನ್ನುಂಟು ಮಾಡುತ್ತದೆ. ಆದ್ದರಿಂದ ಹೃದಯವನ್ನು ಆರೋಗ್ಯವಾಗಿಡಲು ನೀವು ಯಾವುದೇ ರೂಪದಲ್ಲಿ ತಂಬಾಕು ಸೇವನೆಯನ್ನು ಮಾಡಬಾರದು, ದೂಮಪಾನವನ್ನು ಬಿಟ್ಟುಬಿಡಿ, ದೂಮಪಾನ ನಿಮ್ಮ ಆರೋಗ್ಯವನ್ನು ಅನಾರೋಗ್ಯ ಪೀಡಿತವನ್ನಾಗಿ ಮಾಡುತ್ತದೆ. ವ್ಯಾಯಾಮದ ಮೂಲಕ ಹೃದಯಘಾತದಿಂದ ತಪ್ಪಿಸಬಹುದು.

ಡಾ. ಸರಸ್ವತಿ, ಆಯುಷ್ ಇಲಾಖೆಯ ವೈದ್ಯಾಧಿಕಾರಿ, ತಿಮ್ಮಪ್ಪಯ್ಯನಹಳ್ಳಿ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ.

ಪ್ರಮುಖ ಸುದ್ದಿ

# ನಗರದಲ್ಲಿ ನೇತ್ರದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

» ಚಿತ್ರದುರ್ಗ

ಬಸವೇಶ್ವರ ಪುನರ್ ಜ್ಯೋತಿಐ ಬ್ಯಾಂಕ್‌ವತಿಯಿಂದ 38ನೇ ರಾಷ್ಟ್ರೀಯ ನೇತ್ರದಾನದ ಪಾಕ್ಷಿಕ ಅಂಗವಾಗಿ ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‌ನ ಸ್ಥಾಪನಾಧ್ಯಕ್ಷರಾದ ಗಾಯತ್ರಿ ಶಿವರಾಮ್‌ರವರು ಸರ್ಕಾರಿ ಪಾಲಿಟೆಕ್ನಿಕ್ ಮಹಾವಿದ್ಯಾಲಯದ ಪ್ರಾಚಾರ್ಯ ರಮೇಶ್‌ರವರಿಗೆ ನೇತ್ರದಾನದ ಬಗ್ಗೆ ಮಾಹಿತಿ ಇರುವ ಭಿತ್ತಿ ಪತ್ರವನ್ನು ನೀಡುವ ಮೂಲಕ ನೇತ್ರದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈಸಂದರ್ಭದಲ್ಲಿಮಾತನಾಡಿದಶ್ರೀಮತಿ ಗಾಯತ್ರಿಯವರು ನೇತ್ರದಾನ ಬಹಳ




ಮುಖ್ಯವಾದ ದಾನವಾಗಿದೆ ನಮ್ಮ ಸಾವಿನ ನಂತರವು ನಮ್ಮ ಖಣ್ಣುಗಳು ಜೀಂವತವಾಗಿ ಇರಬೇಕಾದರೆ ನಿಮ್ಮ ಮರಣದ ನಂತರ ನಿಮ್ಮ ಕಣ್ಣುಗಳನ್ನು ದಾನ ಮಾಡುವುದರ ಮೂಲಕ ಇಬ್ಬರು ಅಂಧರಿಗೆ ನೇತ್ರವನ್ನು ಅಳವಡಿಸಲಾಗುವುದು ಇದರಿಂದ ಇಬ್ಬರ ಬದುಕಿಗೆ ದಾರಿ ದೀಪವಾದಂತೆ ಆಗಲಿದೆ ಎಂದರು.ರೋಟರಿ ಕ್ಲಬ್ ಫೋರ್ಟ್ ಅಧ್ಯಕ್ಷ ಎಂ ಗಿರೀಶ್ ಮಾತನಾಡಿ ನೇತ್ರ ಮಾನವನಿಗೆ ಅತಿ ಅಮೂಲ್ಯವಾದ ಅಂಗವಾಗಿದೆ ಮಾನವ ತನ್ನ ದೇಹದಲ್ಲಿ ಬೇರೆ ಅಂಗಗಳು ಊನಾದರೂ ಸಹಾ ಬದುಕನ್ನು ನಡೆಸಬಹುದಾಗಿದೆ ಆದರೆ ನೇತ್ರ ಇಲ್ಲವಾದರೇ ನಮ್ಮ ಬದುಕನ್ನು ನಡೆಸಲು ಬೇರೆಯವರ ಸಹಾಯವನ್ನು ಪಡೆಯವುದು ಅನಿವಾರ್ಯವಾಗುತ್ತದೆ ಎಂದ ಅವರು ನಾವು ಸತ್ತ ನಂತರ ನಮಗೆ ಕಣ್ಣುಗಳ ಆವಶ್ಯಕತೆ ಇರುವುದಿಲ್ಲ ಈ ಹಿನ್ನಲೆಯಲ್ಲಿ ನಮ್ಮ ಕಣ್ಣುಗಳನ್ನು ನಮ್ಮ ಮರಣದ ನಂತರ ಬೇರೆಯವರಿಗೆ ದಾನ ಮಾಡುವುದರ ಮುಲಕ ಇಬ್ಬರು ಅಂಧರಿಗೆ ಸಹಾಯ ಮಾಡಿದಂತೆ ಆಗುತ್ತದೆ ಇದರ ಮಹತ್ವದ ಬಗ್ಗೆ ನಿಮ್ಮ ಮನೆಗಳಲ್ಲಿ ತಿಳಿಸಿ ಎಂದರು. ಕಾರ್ಯಕ್ರಮದಲ್ಲಿ ಐ ಬ್ಯಾಂಕ್ ಅಧ್ಯಕ್ಷರಾದ ಪಿ ಬಿ ಶಿವರಾಮ್, ಐ ಬ್ಯಾಂಕ್ ಕಾರ್ಯದರ್ಶಿ ಟಿ.ವಿ.ಸ್ವಾಮಿ, ಸಂಚಾಲಕರಾದ ಎಸ್ ವೀರೇಶ್, ಮಹಿಳಾ ಪ್ರಾಧ್ಯಾಪಕರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಡಿ ಸೌಲಭ್ಯಕ್ಕಾಗಿ ಅರ್ಜಿ

» ಬಳ್ಳಾರಿ

ತೋಟಗಾರಿಕೆ ಇಲಾಖೆಯಿಂದ 2023–24ನೇ ಸಾಲಿಗೆ ಬಳ್ಳಾರಿ ಮತ್ತು ಕುರುಗೋಡು ತಾಲೂಕುಗಳಲ್ಲಿ ಕೆಎಂಇಆರ್‌ಸಿಯ ಸಿಇಪಿಎಂಐಜೆಡ್ ಯೋಜನೆಯಡಿ ವಿವಿಧ ತೋಟಗಾರಿಕೆ ಸೌಲಭ್ಯಗಳಿಗಾಗಿ ಅರ್ಹ ತೋಟಗಾರಿಕೆ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈರುಳ್ಳಿ ಶೇಖರಣೆ ಘಟಕ ಹಾಗೂ ಫಾರಂ ಗೇಟ್ ಘಟಕಗಳು ನಿರ್ಮಾಣಕ್ಕಾಗಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಮಗಾ ಮೈಕ್ರೋ ಆಗ್ರಿ–ಹಾರ್ಟಿ ಸಿಸ್ಟಮ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲಾಗುತ್ತಿರುವ ತೋಟಗಾರಿಕೆ ಬೆಳೆಗಳಾದ ಮಾವು, ಸೀತಾಫಲ, ಸೀಬೆ, ಗೇರು, ಹುಣಸೆ, ನೇರಳೆ ಮತ್ತು ಎಳೆನೀರು ತೆಂಗಿನಕಾಯಿ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮ, ಬಯೋಡೈಜೆಸ್ಟರ್, ಅರಣ್ಯ ಬೆಳೆಗಳಾದ ಸಾಗುವಾನಿ, ಮಹಾಗನಿ ಮತ್ತು ಶ್ರೀಗಂಧ ಬೆಳೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ತೋಟಗಾರಿಕೆ ರೈತ ಫಲಾನುಭವಿಗಳು ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08392–278177 ಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಸ್ಕಾಂ ಸಂಪರ್ಕ ಸಭೆ

» ಶಿವಮೊಗ್ಗ

ಮೆಸ್ಕಾಂ ಹೊಸನಗರ ಉಪವಿಭಾಗ ಕಛೇರಿಯಲ್ಲಿ ಸೆ.6 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಜನ ಸಂಪರ್ಕ ಸಭೆ ನಡೆಯಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ.:9448289517 ನ್ನು ಸಂಪರ್ಕಿಸುವುದು.

### ನ್ಯಾಯಬೆಲೆ ಅಂಗಡಿ ತರೆಯಲು ಅರ್ಜಿ ಆಹ್ವಾನ

» ಶಿವಮೊಗ್ಗ

ಶಿವಮೊಗ್ಗ ಅನೌಪಚಾರಿಕ ಪಡಿತರ ಪ್ರದೇಶ ವ್ಯಾಪ್ತಿಯಲ್ಲಿ ಹೊಸದಾಗಿ ಮೂರು ನ್ಯಾಯಬೆಲೆ ಅಂಗಡಿ ತೆರೆಯಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಸೂಳೇಬೈಲು ಮುಖ್ಯರಸ್ತೆಯ ಮತ್ತೂರು ಸೊಸೈಟಿಯ ಅಕ್ಕ–ಪಕ್ಕ, ಗೋಪಾಳ ಮುಖ್ಯರಸ್ತೆಯ ದ್ರೌಪದಮ್ಮ ಸರ್ಕಲ್‌ನ ವಿಜಯನಗರದ ಎಡಭಾಗ ಮತ್ತು ಮತ್ತೂರು ಸೂಳೇಬೈಲು ರಸ್ತೆಯ ಇಂದ್ರಾನಗರ ಅರಳಿಕಟ್ಟೆ ರಸ್ತೆಯ ಅಕ್ಕ–ಪಕ್ಕ ಸ್ಥಳಗಳಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ಆರಂಭಿಸಲು ಆಸಕ್ತ ಅರ್ಹರು ಶಿವಮೊಗ್ಗ ಅನೌಪಚಾರಿಕ ಪಡಿತರ ಪ್ರದೇಶ ಅಥವಾ ಉಪನಿರ್ದೇಶಕರ ಕಚೇರಿಯಿಂದ ಅರ್ಜಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಸೆ.30 ರೊಳಗಾಗಿ ಸಲ್ಲಿಸುವಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಝರಿಫಾಲ್ಸ್‌ನ ಸುತ್ತಮುತ್ತಾ ಸ್ವಚ್ಚತಾ ಕಾರ್ಯಕ್ರಮ



» ಚಿಕ್ಕಮಗಳೂರು

ತಾಲ್ಲೂಕಿನ ಅತ್ತಿಗುಂಡಿ ಗ್ರಾಮದಲ್ಲಿರುವ ಝರಿಫಾಲ್ಸ್‌ನ ಸುತ್ತಮುತ್ತ ಜೀಪ್ ಮಾಲೀಕರು ಮತ್ತು ಚಾಲಕರು ಹಾಗೂ ರಸ್ತೆಬದಿ ವ್ಯಾಪಾರಿಗಳಿಂದ ಸ್ವಚ್ಚತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಪ್ರವಾಸಿಗರಿಂದ ಮಾಲೀನವಾಗಿದ್ದ ಪ್ರದೇಶವನ್ನು ಶ್ರಮದಾನ ಮಾಡುವ ಮೂಲಕ ಅಪಾರ ಪ್ರಮಾಣದ ತ್ಯಾಜ್ಯವನ್ನು ಸಂಗ್ರಹಿಸಿ ಪ್ರವಾಸಿ ತಾಣಗಳನ್ನು ಸುಂದರವಾಗಿಡಲು ಮಾದರಿಯಾದರು ಮತ್ತು ನಿರಂತರವಾಗಿ ಸ್ವಚ್ಚತಾ ಕಾರ್ಯವನ್ನು ಮಾಡುವ ಇಂಗಿತ ವ್ಯಕ್ತಪಡಿಸಿರು.ಶ್ರಮದಾನ ಮಾಡಿ ಮಾತನಾಡಿದ ಜೀಪ್ ಚಾಲಕರು ಪ್ರವಾಸಿ ತಾಣಗಳಿಗೆ ಆಗಮಿಸುವ ಪ್ರವಾಸಿಗರು ಪ್ರವಾಸಿತಾಣಗಳಲ್ಲಿ ತ್ಯಾಜ್ಯಗಳನ್ನು ಎಸೆಯದಂತೆ ಮತ್ತು ಪ್ಲಾಸ್ಟಿಕ್ ಬಾಟಲಿಗಳನ್ನು ಬಳಸದಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಿವಕುಮಾರ್, ಸುಕ್ಲೇನ್, ಮೋಹನ್ ಕುಮಾರ್, ಆದಿಲ್, ಧರ್ಮರಾಯ, ಸಂಶೀದ್, ರಿಯಾಜ್, ರಂಜು, ಜಂಶೀದ್, ಇಮ್ರಾನ್, ತಮೀಮ್. ಸತೀಶ್, ಸುಮಾನ್ ಇನ್ನು ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T